ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 164

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 07-06-2026

# ಬಗೆಹರಿಯದ ಖಾತೆ ಬಿಕ್ಕಟ್ಟು

**ಬೆಂಗಳೂರು, ಜೂ. 6–** ಖಾತೆ ಹಂಚಿಕೆ ಬಗ್ಗೆ ಅಸಮಾಧಾನಗೊಂಡಿರುವ ಸಚಿವ ರಾಮಲಿಂಗಾರೆಡ್ಡಿಯವರ ಮನವೊಲಿಸಿ ಅವರ ಮುನಿಸನ್ನು ತಣಿಸುವ ಪ್ರಯತ್ನಗಳು ನಡೆದಿದ್ದು, ಖಾತೆ ಹಂಚಿಕೆ ಬಿಕ್ಕಟ್ಟು ಇನ್ನು ಸುಖಾಂತ್ಯ ಕಂಡಿಲ್ಲ.

ಬೆಂಗಳೂರು ನಗರಾಭಿವೃದ್ಧಿ ಖಾತೆಗೆ ಪಟ್ಟು ಹಿಡಿದು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವ ರಾಮಲಿಂಗಾರೆಡ್ಡಿಯವರ ಮನವೊಲಿಸುವ ಪ್ರಯತ್ನವನ್ನು ಕಾಂಗ್ರೆಸ್ ನಾಯಕರು ನಡೆಸಿದ್ದು, ಸಚಿವ ರಾಮಲಿಂಗಾರೆಡ್ಡಿಯವರು ಮಾತ್ರ ತಮ್ಮ ನಿಲುವಿಗೆ ಬಿಗಿಯಾಗಿ ಅಂಟಿಕೊಂಡಿದ್ದಾರೆ.

ಬೆಂಗಳೂರಿನ ಜಯನಗರದ ಖಾಸಗಿ ಹೋಟೆಲ್‌ನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರು ನಿನ್ನೆ ತಡರಾತ್ರಿಯವರೆಗೂ ರಾಮಲಿಂಗಾರೆಡ್ಡಿಯವರ ಜತೆ ಚರ್ಚೆ ನಡೆಸಿ ಅವರ ಮನವೊಲಿಸುವ ಪ್ರಯತ್ನ ನಡೆಸಿದ ಬೆನ್ನಲ್ಲೇ ಇಂದು ಬೆಳಿಗ್ಗೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ರಾಮಲಿಂಗಾರೆಡ್ಡಿಯವರ ಜತೆ ಸುಮಾರು ಅರ್ಧಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಸಿ ರಾಜೀನಾಮೆಯನ್ನು ವಾಪಸ್ ಪಡೆಯುವಂತೆ ಮನವಿ ಮಾಡಿದ್ದಾರೆ.

ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ನೀಡುವ ಸಂಬಂಧ



ಹೈಕಮಾಂಡ್ ಬಳಿ ಮಾತನಾಡುತ್ತೇವೆ. ಒಂದು ವೇಳೆ ಹೈಕಮಾಂಡ್ ಒಪ್ಪದಿದ್ದರೆ ಬೇರೆ ಖಾತೆಯನ್ನು ನೀಡುತ್ತೇವೆ. ಅದಕ್ಕೆ ಒಪ್ಪಿಕೊಳ್ಳಿ ಎಂದು ರಣದೀಪ್ ಸಿಂಗ್ ಸುರ್ಜೇವಾಲ ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಮಲಿಂಗಾರೆಡ್ಡಿಯವರಿಗೆ ಮನವಿ ಮಾಡಿದ್ದಾರೆ. ಹಾಗಾಗಿ ಖಾತೆ ಹಂಚಿಕೆ ಬಿಕ್ಕಟ್ಟು ಪರಿಹಾರ ಈಗ ಹೈಕಮಾಂಡ್ ತೀರ್ಮಾನದ ಮೇಲೆ ನಿಂತಿದೆ.

ಬೆಂಗಳೂರು ನಗರಾಭಿವೃದ್ಧಿ ಖಾತೆ ಬಿಟ್ಟು ಬೇರೆ ಖಾತೆ ನೀಡಿದರೆ ಅದಕ್ಕೆ ರಾಮಲಿಂಗಾರೆಡ್ಡಿಯವರು ಒಪ್ಪುವ ಸಾಧ್ಯತೆ ಕಡಿಮೆ ಇದೆ. ಹಾಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲ ಅವರು ಹೈಕಮಾಂಡ್‌ನ್ನು ಯಾವ ರೀತಿ ಮನವೊಲಿಸುತ್ತಾರೆ ಎಂಬುದು ಈಗ ಕುತೂಹಲ ಮೂಡಿಸಿದೆ.

ಇಂದು ಬೆಳಿಗ್ಗೆ ರಣದೀಪ್ ಸಿಂಗ್ ಸುರ್ಜೇವಾಲರವರ ಜತೆ ಚರ್ಚೆ ನಡೆಸಿದ ರಾಮಲಿಂಗಾರೆಡ್ಡಿಯವರು ನಾನು ವಿದ್ಯಾರ್ಥಿ ಕಾಂಗ್ರೆಸ್‌ನಲ್ಲಿದ್ದಾಗಿನಿಂದಲೂ ಬೆಂಗಳೂರಿನಲ್ಲಿ ರಾಜಕಾರಣ ಮಾಡಿದ್ದೇನೆ. ಬೆಂಗಳೂರನ್ನು ಚೆನ್ನಾಗಿ ಬಲ್ಲೆ. ನನಗೆ ಬೆಂಗಳೂರು ಅಭಿವೃದ್ಧಿ ಕೊಡಿ, ಒಳ್ಳೆಯ ಕೆಲಸ ಮಾಡಿ ತೋರಿಸುತ್ತೇನೆ ಎಂದು ಹೇಳಿದ್ದಾರೆ.

ಖಾತೆ ಹಂಚಿಕೆ ಹೈಕಮಾಂಡ್ ತೀರ್ಮಾನವಾಗಿದೆ. ಹಾಗಾಗಿ ಹೈಕಮಾಂಡ್ ಮಾತನ್ನು ಮೀರುವಂತಿಲ್ಲ. ನಾವು ಹೈಕಮಾಂಡ್ ಜತೆ ಮಾತನಾಡುತ್ತೇವೆ. ಒಂದು ವೇಳೆ ಹೈಕಮಾಂಡ್ ಒಪ್ಪದಿದ್ದರೆ ಜಲಸಂಪನ್ಮೂಲ ಖಾತೆ ಬಿಟ್ಟು ಬೇರೆ ಖಾತೆಯನ್ನು ಪಡೆದುಕೊಳ್ಳಿ. ಇಲ್ಲದಿದ್ದರೆ ಹೆಚ್ಚುವರಿಯಾಗಿ ಬೇರೆ ಖಾತೆಯನ್ನು ಕೊಡುವ ಸಂಬಂಧ ಹೈಕಮಾಂಡ್ ಜತೆ ಚರ್ಚಿಸುವುದಾಗಿಯೂ ಸುರ್ಜೇವಾಲ ಹೇಳಿದ್ದಾರೆ ಎನ್ನಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ರಾಮಲಿಂಗಾ ರೆಡ್ಡಿಯವರ ಜತೆ ನಿನ್ನೆ ರಾತ್ರಿ 2 ಗಂಟೆಯವರೆಗೂ ಸಭೆ ನಡೆಸಿ ಅವರ ಮನವೊಲಿಸುವ ಪ್ರಯತ್ನ ಮಾಡಿದರು. 2ನೇಪುಟಕ್ಕೆ

# ನಮಾಜಗೇರಿ ಗುಡ್ಡದಲ್ಲಿ ಶಿಕ್ಷಣ ಇಲಾಖೆಯಿಂದ ಶಾಲಾ ದಾಖಲಾತಿ ಅಂದೋಲನ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ನಮಾಜಗೇರಿ ಗುಡ್ಡದಲ್ಲಿ ಶಿಕ್ಷಣ ಇಲಾಖೆಯಿಂದ ನಡೆದ ಶಾಲಾ ದಾಖಲಾತಿ ಅಂದೋಲನಕ್ಕೆ ನಮಾಜಗೇರಿ ಗುಡ್ಡ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಾಭಾರಿ ಮುಖ್ಯಗುರುಗಳಾದ ಗೀರಿಜಾ ದೇವಿ ಚಾಲನೆ ನೀಡಿ ಮಾತನಾಡಿ ಪ್ರತಿಯೊಂದು ಮಗುವಿಗೂ ಶಿಕ್ಷಣ ದೊರೆಯಬೇಕು ಎನ್ನುವ ಉದ್ದೇಶದಿಂದ ಸರಕಾರವು ಶಿಕ್ಷಣ ಇಲಾಖೆಯ ಮೂಲಕ ಶಿಕ್ಷಣವನ್ನು ಉಚಿತವಾಗಿ ನೀಡಲಾಗುತ್ತಿದೆ ಹಾಗೂ ಉಚಿತ ಪಠ್ಯ ಪುಸ್ತಕ,ಸಮವಸ್ತ್ರ ಮಧ್ಯಾಹ್ನ ಬಿಸಿಯೂಟ, ಹಾಲು ಸೇರಿದಂತೆ ವಿವಿಧ ಸೌಲಭ್ಯಗಳನ್ನು ಮಕ್ಕಳಿಗೆ ಸರಕಾರದಿಂದ ನೀಡಲಾಗುತ್ತಿದು. ನಮ್ಮ ಶಾಲೆಯಲ್ಲಿ 1 ರಿಂದ 7 ತರಗತಿವರೆಗೆ ದಾಖಲಾತಿ ಪ್ರಾರಂಭವಾಗಿದು ಪಾಲಕರು 2ನೇ ಪುಟಕ್ಕೆ

# ಆತ್ಮನಿರ್ಭರ ಭಾರತ ಮಿಷನ್ ಅಡಿಯಲ್ಲಿ ರೈತರಿಗೆ ದ್ವಿದಳ ಬಿತ್ತನೆ ಬೀಜ ವಿತರಣೆ



ಧೈರ್ಯದ ದಾರಿ

**ರಾಯಚೂರು ಜೂನ್ 06:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಆತ್ಮನಿರ್ಭರ ಭಾರತ ದ್ವಿದಳ ಧಾನ್ಯಗಳ ಮಿಷನ್ ಅಡಿಯಲ್ಲಿ ತಾಲ್ಲೂಕಿನ ಅರ್ಹ ರೈತರಿಗೆ ಉಚಿತ ದ್ವಿದಳ ಧಾನ್ಯಗಳ ಬೀಜದ ಕಿಟ್‌ಗಳನ್ನು ರಾಯಚೂರಿನ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದಲ್ಲಿ ಶನಿವಾರ ವಿತರಿಸಲಾಯಿತು.

ಕಾರ್ಯಕ್ರಮಕ್ಕೆ ರಾಯಚೂರಿನ ಉಪ ಕೃಷಿ ನಿರ್ದೇಶಕರಾದ ನಯೀಮ್ ಹುಸೇನ್ ಅವರು ಚಾಲನೆ ನೀಡಿ ಮಾತನಾಡಿದ ಅವರು, ದೇಶದಲ್ಲಿ ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸಿ ರೈತರ ಆದಾಯವನ್ನು ವೃದ್ಧಿಸುವುದು ಸದರಿ ಯೋಜನೆಯ ಉದ್ದೇಶವಾಗಿದೆ. ದ್ವಿದಳ ಧಾನ್ಯ ಮಣ್ಣಿನ ಫಲವತ್ತತೆ ಹೆಚ್ಚಿಸುವುದರ ಜೊತೆಗೆ ಜನರ ಪೌಷ್ಟಿಕಾಂಶ ಭದ್ರತೆಯಲ್ಲಿಯೂ ಪ್ರಮುಖ ಪಾತ್ರ ವಹಿಸಲಿದೆ. ಕಾರಣ ರೈತರು ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಕೃಷಿಯನ್ನು ಲಾಭದಾಯಕ ಉದ್ಯಮವಾಗಿ ಪರಿವರ್ತಿಸುವಂತೆ ಮನವಿ ಮಾಡಿಕೊಂಡರು. ಈ ವೇಳೆ ರಾಯಚೂರು ತಾಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ದೀಪಾ ಎಲ್., ಅವರು ಮಾತನಾಡಿ, ದ್ವಿದಳ ಧಾನ್ಯಗಳ ಬೇಡಿಕೆ ಹೆಚ್ಚುತ್ತಿದ್ದು, ರೈತರು ಸುಧಾರಿತ ತಳಿಗಳ ಅಳವಡಿಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಹೇಳಿದರು.

ಅಧಿಕ ಇಳುವರಿ ನೀಡುವ, ಹವಾಮಾನ ವೈಪರೀತ್ಯಗಳನ್ನು ಸಹಿಸಬಲ್ಲ, ಕೀಟ ಹಾಗೂ ರೋಗ ನಿರೋಧಕ ಗುಣಗಳನ್ನು ಹೊಂದಿರುವ ಪ್ರಮಾಣಿತ ಬೀಜಗಳನ್ನು ರೈತರಿಗೆ ಉಚಿತವಾಗಿ ವಿತರಿಸಲಾಗುತ್ತಿದೆ. ಮುಂಗಾರು ಹಂಗಾಮಿನ ಬಿತ್ತನೆಗೆ ಪೂರಕವಾಗಿ ಬಿತ್ತನೆ ಬೀಜಗಳನ್ನು ಹಾಗೂ ರಸಗೊಬ್ಬರಗಳನ್ನಯ ಅಗತ್ಯವಿರುವಷ್ಟು ದಾಸ್ತಾನು ಮಾಡಿಕೊಳ್ಳಲಾಗಿದೆ. ಕೆ.ಕಿಸಾನ್ ತಂತ್ರಾಂಶದ ಮೂಲಕ ಫ್ರೋಟ್ಸ್ ಎಫ್‌ಐಡಿ ಆಧಾರಿತವಾಗಿ ಯೂರಿಯಾ ರಸಗೊಬ್ಬರ ವಿತರಣೆ ಕಡ್ಡಾಯಗೊಳಿಸಲಾಗಿದೆ. ಯೂರಿಯಾಕ್ಕೆ ಪರ್ಯಾಯವಾಗಿ ಸಂಯುಕ್ತ ಗೊಬ್ಬರಗಳ ಬಳಕೆ ಮಾಡವ ಕುರಿತು ರೈತರಿಗೆ ಜಾಗೃತಿಯನ್ನು ಮೂಡಿಸಲಾಯಿತು. ಇದೇ ಸಂದರ್ಭದಲ್ಲಿ ರೈತ ಸಂಘದ ಅಧ್ಯಕ್ಷ ಲಕ್ಷ್ಮಣ ಗೌಡ ಕಡಗಮದೊಡ್ಡಿ ಸೇರಿದಂತೆ ರೈತ ಉತ್ಪಾದಕ ಸಂಸ್ಥೆಯ ಪ್ರತಿನಿಧಿಗಳು, ಪ್ರಗತಿ ಪರ ರೈತರು ಕಾರ್ಯಕ್ರಮದಲ್ಲಿ ಇದ್ದರು.

# ಒಂದು ಸಸಿ ನೆಡಿ... ಭವಿಷ್ಯವನ್ನು ಹಸಿರಾಗಿಸಿ!




ಧೈರ್ಯದ ದಾರಿ

**ಮಾನ್ವಿ :** ಯುವಕರ ಕಣ್ಮಣಿ, ಯುವ ಚೈತನ್ಯದ ಚಿಲುಮೆ ಹಾಗೂ ಕಾಂಗ್ರೆಸ್ ಮುಖಂಡರಾದ ದಿ. ರಾಜಾ ವಸಂತ ನಾಯಕ ಅವರ ಜನ್ಮದಿನದ ಪ್ರಯುಕ್ತ ದಿ. ಶ್ರೀ ರಾಜಾ ಹನುಮಪ್ಪ ನಾಯಕ ದೊರೆ ಸ್ಮಾರಕ ಸಮಾಜ ಸೇವಾ ಸಂಸ್ಥೆ (ರಿ), ಮಾನ್ವಿ, ದಿ. ಶ್ರೀ ರಾಜಾ ಸಂಜೀವ ನಾಯಕ ದೊರೆ ಫೌಂಡೇಶನ್ (ರಿ) ಹಾಗೂ ಆರ್.ವಿ.ಎನ್. ಗ್ರೂಪ್ ವತಿಯಿಂದ ಉಚಿತ ಸಸಿ ವಿತರಣೆ ಮತ್ತು ಪರಿಸರ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಪಟ್ಟಣದ ಶ್ರೀ ರಂಗನಾಥ ಪ್ರೌಢ ಶಾಲೆ ಆವರಣದಲ್ಲಿ ಜೂನ್ 8ರಂದು ಬೆಳಿಗ್ಗೆ 10:30 ಗಂಟೆಗೆ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಸಸಿಗಳನ್ನು ವಿತರಿಸಲಾಗುವುದು. ಪರಿಸರ ಸಂರಕ್ಷಣೆ, ಹಸಿರು ವಾತಾವರಣ ನಿರ್ಮಾಣ ಹಾಗೂ ಯುವಜನರಲ್ಲಿ ಪರಿಸರದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ.

ಪರಿಸರ ಉಳಿವಿಗಾಗಿ ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡವನ್ನು ನೆಟ್ಟು ಅದರ ಪೋಷಣೆಯ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ

# ಪ್ರತಿ ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ: ಉಪ ಆಯುಕ್ತ ಶರಣಪ್ಪ

ಧೈರ್ಯದ ದಾರಿ

**ರಾಯಚೂರು ಜೂನ್ 06:** ಜಿಲ್ಲೆಯಲ್ಲಿ ಜೂನ್ 28ರಂದು ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದಡಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಮಹಾನಗರ ಪಾಲಿಕೆ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ ಅವರು ಹೇಳಿದರು.

ಜೂನ್ 06ರ ಶನಿವಾರ ದಂದು ನಗರದ ಮಹಾನಗರ ಪಾಲಿಕೆಯ ಕಚೇರಿಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೆ ಪೋಲಿಯೋ ಮುಕ್ತ ಭಾರತದ ವಿಜಯವನ್ನು ಮುಂದುವರೆಸಲು ರಾಯಚೂರು ನಗರದ ಸೇರಿದಂತೆ ತಾಲೂಕಿನಾದ್ಯಂತ ಜೂನ್ 28ರ ಭಾನುವಾರ ಪೋಲಿಯೋ ಲಸಿಕೆ ಹಾಕಿಸಲು ಇಂದಿನಿಂದಲೇ ವ್ಯಾಪಕ ಪ್ರಚಾರ ಮಾಡೋಣವೆಂದರು.

ನಗರ ಪ್ರದೇಶದಲ್ಲಿ 37,983 ಮಕ್ಕಳಿಗೆ ಲಸಿಕೆ ಹಾಕಲು ಜನನೀಬಿಡ ಪ್ರದೇಶವಾದ ಸಂತೆ ಮಾರುಕಟ್ಟೆ, ರೈಲು ನಿಲ್ದಾಣ, ಬಸ್ ನಿಲ್ದಾಣ ಮುಂತಾದವುಗಳಲ್ಲಿ ಲಸಿಕೆ ಹಾಕಲು 9 ಟ್ರಾನ್ಸಿಟ್ ತಂಡಗಳು, 01 ಸಂಚಾರಿ ತಂಡ ಹಾಗೂ ಮನೆ ಬೇಟಿಗಾಗಿ 146 ತಂಡಗಳು ಕಾರ್ಯನಿರ್ವಹಿಸುತ್ತಿರುವದಕ್ಕೆ ಬೆಂಬಲವಾಗಿ ನಗರದಲ್ಲಿ ಪ್ರಚಾರಕ್ಕಾಗಿ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ಸ್ ಹಾಗೂ ಬ್ಯಾನರ್, ಪ್ಲೇಕ್ಸ್ ಅಳವಡಿಕೆ, ತಂಡದ ಸದಸ್ಯರಿಗೆ ಅಹಾರ ಪೊಟ್ಟಣ ವಿತರಣೆ ಕೈಗೊಳ್ಳಲಾಗುವುದು. ಅಲ್ಲದೆ ಮಹಾನಗರ ಪಾಲಿಕೆಯಡಿ ಆಯುಕ್ತರ ಮಾರ್ಗದರ್ಶನದಲ್ಲಿ ಎಲ್ಲ ಸಹಕಾರ ನೀಡಲಾಗುವುದು ಎಂದರು.

ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ 76,502 ಮಕ್ಕಳಿಗೆ ಲಸಿಕೆ ಹಾಕಲು ಜನನೀಬಿಡ ಪ್ರದೇಶವಾದ ಸಂತೆ ಮಾರುಕಟ್ಟೆ, ಬಸ್ ನಿಲ್ದಾಣ ಮುಂತಾದವುಗಳಲ್ಲಿ ಲಸಿಕೆ ಹಾಕಲು 16 ಟ್ರಾನ್ಸಿಟ್ ತಂಡಗಳು ಹಾಗೂ ವಲಸೆ ಪ್ರದೇಶ, ಕಟ್ಟಡ ಕಾಮಗಾರಿ, ಇಟ್ಟಿಗೆ ಬಟ್ಟಿ, ಕಬ್ಬು ಕಡೆಯುವ ಜಾಗೆ, ಕುರಿಹಟ್ಟಿ, ಕೊಳಚೆ ಪ್ರದೇಶ, ತೋಟದ ಮನೆ, ಮುಂತಾದ ಸ್ಥಳಗಳಲ್ಲಿರುವ ಲಸಿಕೆ ಹಾಕಲು 03 ಸಂಚಾರಿ ತಂಡ ಹಾಗೂ ಮನೆ ಬೇಟಿಗಾಗಿ 316 ತಂಡಗಳು ಕಾರ್ಯ ನಿರ್ವಹಿಸುತ್ತಿದ್ದು, ಬೆಂಬಲವಾಗಿ ಗ್ರಾಮೀಣ ಪ್ರದೇಶದಲ್ಲಿ ಪ್ರಚಾರಕ್ಕಾಗಿ ಗ್ರಾಮ ಪಂಚಾಯತಗಳ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ಸ್ ಅಂಗನವಾಡಿ ಪೂರ್ವ ಪ್ರಾಥಮಿಕ ಹಂತದ ಎಲ್ಲ ನರ್ಸರಿ, ಕಿಡರ್ ಗಾರ್ಟನ್, ಬೇಬಿ ಸಿಟ್ಟಿಂಗ್‌ನಲ್ಲಿಯ ಮಕ್ಕಳಿಗೆ ಎರಡು ದಿನ ಮೊದಲು ಲಸಿಕೆ ಹಾಕಲು ಸಿದ್ದತೆ



ಕೈಗೊಳ್ಳಲು ನಿರ್ದೇಶನ ನೀಡಲಾಯಿತು.

ಶಾಲೆ, ಅಂಗನವಾಡಿಗಳಲ್ಲಿ ಬೂತ್ ಇರುವ ಸ್ಥಳಗಳಲ್ಲಿ ಮೊದಲೆ ಸ್ವಚ್ಚಗೊಳಿಸಿಡಲು ಸಂಭಂದಿಸಿದವರು ಕ್ರಮವಹಿಸಲು ಹಾಗೂ ಶಾಲಾ ಮಕ್ಕಳ ಜಾಥಾ ಹಮ್ಮಿಕೊಳ್ಳಲು ತಹಶೀಲ್ದಾರರು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಹಾಗೂ ಪಾಲಿಕೆಯ ಅರೋಗ್ಯ ಅಧಿಕಾರಿ ಡಾ ಮಹಮ್ಮದ್ ಶಾಕೀರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಚಂದ್ರಶೇಖರಯ್ಯ ಸ್ವಾಮಿ, ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮೃತ ಹುಕ್ಕೇರಿ, ಪರಿಸರ ಅಭಿಯಂತರರು ಜಯಪಾಲರೆಡ್ಡಿ, ಆಯುಷ್ ಇಲಾಖೆಯ ಡಾ.ಪೂಜಾ, ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಶಿಕ್ಷಣ ಇಲಾಖೆಯ ಟಿಪಿಓ ಭಾಸ್ಕರ್ ಕುಮಾರ್, ಡಿವೈಹೆಚ್‌ಇಓ ಬಸಯ್ಯ, ಐಸಿಡಿಎಸ್‌ನ ಚನ್ನಮ್ಮ, ಆರ್‌ಟಿಓ ಕಚೇರಿಯ ಅರ್ಜುನ ಚೌವ್ಹಾಣ್, ಬಿಸಿಎಮ್ ಇಲಾಖೆಯ ಈರಣ್ಣ ಪತ್ತಾರ, ಹಿರಿಯ ಹೆಚ್‌ಐಓ ಸುರೇಶ, ಬಿಹೆಚ್‌ಇಓ ಸರೋಜಾ ಕೆ, ಹಿರಿಯ ಪಿಹೆಚ್‌ಸಿಓ ಈರಮ್ಮ, ಪಾಲಿಕೆ ನೈರ್ಮಲ್ಯ ನೀರಿಕ್ಷಕರಾದ ತಿಕ್ಕಾರೆಡ್ಡಿ, ರಾಮಚಂದ್ರ, ಆಕಾಶ ಪಾಟೀಲ್, ಬಿಪಿಎಮ್ ವರಲಕ್ಷ್ಮಿ, ನಂದಿನಿ ಕಾಲೇಜಿನ ಎಸ್ ರೇಹಾನ್, ಎಮ್‌ಟಿಎಸ್ ಸಂಧ್ಯಾ, ಹಾಗೂ ಆರ್‌ಸಿಹೆಚ್ ವಿಭಾಗದ ರವಿ, ನರೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

# ಬಗೆಹರಿಯದ ಖಾತೆ ಬಿಕ್ಕಟ್ಟು

ರಾಮಲಿಂಗಾರೆಡ್ಡಿಯವರ ಜತೆಗಿನ ಮುಖ್ಯಮಂತ್ರಿ ಮಾತುಕತೆ ಯಶಸ್ವಿಯಾಗಿದೆ. ಅವರು ರಾಜೀನಾಮೆ ವಾಪಸ್ ಪಡೆಯುತ್ತಾರೆ ಎಂದು ಮುಖ್ಯಮಂತ್ರಿಗಳ ಆಪ್ತ ಮೂಲಗಳು ಹೇಳಿವೆಯಾದರೂ ರಾಮಲಿಂಗಾರೆಡ್ಡಿಯವರು ಸದ್ಯಕ್ಕಂತೂ ರಾಜೀನಾಮೆ ವಾಪಸ್ ಪಡೆದಿಲ್ಲ. ಹಾಗಾಗಿ ಖಾತೆ ಬಿಕ್ಕಟ್ಟು ಹಾಗೆಯೇ ಮುಂದುವರೆದಿದೆ.
ಈ ಬಿಕ್ಕಟ್ಟು ಪರಿಹಾರಕ್ಕೆ ಹೈಕಮಾಂಡ್ ಯಾವ ರೀತಿ ಮದ್ದು ಅರೆಯುತ್ತದೆ, ಏನು ತೀರ್ಮಾನ ಕೈಗೊಳ್ಳುತ್ತದೆ ಎಂಬುದರತ್ತ ಎಲ್ಲರ ಚಿತ್ತ ನೆಟ್ಟಿದೆ.

ಸಮಸ್ಯೆ ಬಗೆಹರಿದಿದೆ–ಡಿಕೆಶಿ
"ನಮ್ಮ ಕುಟುಂಬದ ಸಮಸ್ಯೆ ನಾವು ಬಗೆಹರಿಸಿಕೊಳ್ಳುತ್ತೇವೆ. ನಾನು ಮುಖ್ಯಮಂತ್ರಿ, ಅವರು (ರಾಮಲಿಂಗಾರೆಡ್ಡಿ) ಸಚಿವರು. ಆದರೂ ನಾವೆಲ್ಲರೂ ಸ್ನೇಹಿತರು. ರಾಮಲಿಂಗಾರೆಡ್ಡಿ ಅವರು ಪಕ್ಷದ ಹಿರಿಯರು, ಬೆಂಗಳೂರಿನಲ್ಲಿ ಪಕ್ಷ ಉಳಿಸುತ್ತಿರುವವರು. ಪಕ್ಷ ಬೆಳೆಸಲು ಕೆಲಸ ಮಾಡುತ್ತಿರುವವರು" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.
ರಾಮಲಿಂಗಾರೆಡ್ಡಿ ಅವರ ಜತೆ ಶುಕ್ರವಾರ ತಡರಾತ್ರಿವರೆಗೂ ಸಮಾಲೋಚನೆ ನಡೆಸಿದ ಬಳಿಕ ಖಾಸಗಿ ಹೊಟೇಲ್ ಬಳಿ ಮಾಧ್ಯಮಗಳ ಪ್ರಶ್ನೆಗೆ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು.

ರಾಮಲಿಂಗಾರೆಡ್ಡಿ ಅವರ ಮುನಿಸು ಶಮನವಾಗಿದೆಯೇ ಎಂದು ಕೇಳಿದಾಗ ಹೀಗೆ ಉತ್ತರಿಸಿದರು.
ಅದೇ ಖಾತೆಯಲ್ಲೇ ಮುಂದುವರೆಯುತ್ತಾರೆಯೇ ಎಂದು ಕೇಳಿದಾಗ, "ನಾವು ಖಾತೆ ವಿಚಾರವಾಗಿ ಏನು ಮಾತನಾಡಿದ್ದೇವೆ, ಬೇರೆ ಯಾವ ವಿಚಾರ ಮಾತನಾಡಿದ್ದೇವೆ ಎಂದೆಲ್ಲಾ ಮಾಧ್ಯಮಗಳ ಮುಂದೆ ಹೇಳಲು ಆಗುತ್ತದೆಯೇ?" ಎಂದು ಮರುಪ್ರಶ್ನಿಸಿದರು.
ಇಂತಹ ಬೆಳವಣಿಗೆಗಳ ಬಗ್ಗೆ ಕೇಳಿದಾಗ, "ಇದೆಲ್ಲಾ ಆಗುತ್ತಾ ಇರಬೇಕು. ಮಳೆ, ಗುಡುಗು, ಸಿಡಿಲು, ಸೂರ್ಯ ಮುಳುಗುವುದು, ಹುಟ್ಟುವುದು ಸಹಜ" ಎಂದು ಹೇಳಿದರು.

ರಾಮಲಿಂಗಾರೆಡ್ಡಿ ಅವರು ಖಾತೆ ಬದಲಾವಣೆಗೆ ಒಪ್ಪಿಕೊಂಡಿದ್ದಾರೆಯೇ ಎಂದು ಕೇಳಿದಾಗ, "ಅವರು ಪಕ್ಷ ಬಿಟ್ಟು ಹೋಗುತ್ತಾರೆಯೇ? ಹಾಗೆಂದು ಹೇಳಿದ್ದಾರೆಯೇ? ಅವರು ತಮ್ಮ ನೋವನ್ನು ಹೇಳಿಕೊಂಡಿದ್ದಾರೆ. ಒಂದಷ್ಟು ತಪ್ಪು ಸಂವಹನ ಆಗಿದೆ. ಸರಿಪಡಿಸುತ್ತೇವೆ" ಎಂದರು.

# ನಮಾಜಗೇರಿ ಗುಡ್ಡದಲ್ಲಿ ಶಿಕ್ಷಣ ಇಲಾಖೆಯಿಂದ ಶಾಲಾ ದಾಖಲಾತಿ ಅಂದೋಲನ

ಕೂಡಲೇ ತಮ್ಮ 4 ವರ್ಷದ ಮಗುವನ್ನು ಎಲ್.ಕೆ.ಜಿ., 5 ವರ್ಷದ ಮಗುವನ್ನು ಯು.ಕೆ.ಜಿ, ಹಾಗೂ 5 ವರ್ಷ 10 ತಿಂಗಳ ಮಗುವನ್ನು 1 ತರಗತಿಗೆ ದಾಖಲು ಮಾಡುವ ಮೂಲಕ ನಿಮ್ಮ ಮಕ್ಕಳಿಗೆ ಶಿಕ್ಷಣವನ್ನು ಕೊಡಿಸುವ ಮೂಲಕ ನಿಮ್ಮ ಮಕ್ಕಳ ಭವಿಷ್ಯವನ್ನು ಉತ್ತಮವಾಗಿ ರೂಪಿಸಬೇಕು ಎಂದು ತಿಳಿಸಿದರು.

ಶಾಲೆಯ ಶಿಕ್ಷಕರಾದ ಸಂಗಮೇಶ ಮುಧೋಳ್ ಮಾತನಾಡಿ ತಾಲೂಕಿನಲ್ಲಿ ಎಸ್.ಐ.ಆರ್. ಮತದಾರರ ಪಟ್ಟಿ ಪರಿಷ್ಕರಣೆ ಪ್ರಾರಂಭವಾಗಿದು ಮತದಾರರ ಪಟ್ಟಿಯಲ್ಲಿನ ಎಲ್ಲಾ ಮತದಾರರು ಸಂಬಂಧಿಸಿದ ಮತಗಟ್ಟೆ ಅಧಿಕಾರಿಗಳಿಗೆ ಭೇಟಿ ಮಾಡಿ ತಮ್ಮ ಮತದಾನದ ಪಟ್ಟಿಯಲ್ಲಿ ತಮ್ಮ ಹೆಸರನ್ನು ಮ್ಯಾಪಿಂಗ್ ಮತ್ತು ಲಿಂಕ್ ಮಾಡಿಸಿಕೊಳ್ಳುವಂತೆ ತಿಳಿಸಿದರು.
ನಮಾಜಗೇರಿ ಗುಡ್ಡ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಿಂದ ವಾರ್ಡ್ನ ಪ್ರಮುಖ ಬೀದಿಗಳಲ್ಲಿ ಸರಕಾರಿ ಶಾಲೆಯ ಶಿಕ್ಷಕರು.ಶಾಲಾ ಸುಧಾರಣೆ ಸಮಿತಿ ಪಾದಾಧಿಕಾರಿಗಳು,ಶಾಲೆಯ ಹಳೆ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಜಾಗೃತಿ ಜಾಥ ನಡೆಸಿ ಪಾಲಕರಿಗೆ ತಮ್ಮ ಮಕ್ಕಳನ್ನು ಶಾಲೆಗೆ ದಾಖಲಿಸುವಂತೆ ಜಾಗೃತಿ ಮೂಡಿಸಿದರು.

ಶಾಲಾ ಸುಧಾರಣಾ ಸಮಿತಿಯ ಉಪಾಧ್ಯಕ್ಷರಾದ ಉಪ್ಪರ ಬರಮ್ಮಣ್ಣ, ಪಾಲಕರಾದ ಬಸವರಾಜ,ಆಂಜನೇಯ್ಯ, ನಾಗರಾಜ ಹನುಮಂತ,ಲಲೀತಾ. ಹಾಗೂ ಮಹಿಳಾ ಮತ್ತು ಮಕ್ಕಳ ಇಲಾಖೆಯ ಅಧಿಕಾರಿ ಶಾಹಿನಾಬೇಗಾಂ, ಅಂಗನಾವಾಡಿ ಕಾರ್ಯಕರ್ತರಾದ ಜಮುಲಮ್ಮ, ಲಾಲಾಬೀ, ದೇವೇಂದ್ರಮ್ಮ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

# ಕಡ್ಡಾಯ ಬೀಜೋಪಚಾರದಿಂದ ಅಧಿಕ ಇಳುವರಿ ಸಾಧ್ಯ

**ಬೀದರ್, ಜೂ 06 :** ಬೀದರ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದ್ದು, ಅನೇಕ ರೈತರು ಮುಂಗಾರು ಹಂಗಾಮಿನ ಬಿತ್ತನೆಕಾರ್ಯವನ್ನುಕೈಗೊಂಡಿದ್ದಾರೆ. ಇನ್ನೂ ಹಲವಾರುರೈತರು ಬಿತ್ತನೆಗೆ ಸಿದ್ಧತೆ ನಡೆಸುತ್ತಿದ್ದಾರೆ. ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ನಮ್ಮ ಪ್ರದೇಶಕ್ಕೆ ಸೂಕ್ತವಾದ ಬೆಳೆಗಳು ಹಾಗೂ ಅಧಿಕ ಇಳುವರಿ ನೀಡುವ ತಳಿಗಳನ್ನು ಆಯ್ಕೆ ಮಾಡಿಕೊಂಡು, ನೂತನ ಕೃಷಿ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಲ್ಲಿ ಉತ್ತಮ ಉತ್ಪಾದನೆ ಪಡೆಯಲು ಸಾಧ್ಯವಾಗುತ್ತದೆ ಎಂದು ಬೀದರ ಐಸಿಎಆರ್ ಕೃಷಿ ವಿಜ್ಞಾನಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಅವರು ತಿಳಿಸಿದ್ದಾರೆ.




ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಹೆಸರು ಹಾಗೂ ಉದ್ದು ಬೆಳೆಗಳನ್ನು ಬಿತ್ತನೆ ಮಾಡಲು ಸಿದ್ಧತೆ ನಡೆಸುತ್ತಿರುವರೈತರು, ಉತ್ತಮ ಇಳುವರಿ ಹಾಗೂ ರೋಗಮುಕ್ತ ಬೆಳೆ ಪಡೆಯಲುಕಡ್ಡಾಯವಾಗಿ ಬೀಜೋಪಚಾರ ಕೈಗೊಳ್ಳಬೇಕು. ಬಿತ್ತನೆಗೆ ಮುನ್ನ ಬೀಜಗಳಿಗೆ ಜೈವಿಕ ಗೊಬ್ಬರಗಳು ಹಾಗೂ ಕೀಟನಾಶಕಗಳಿಂದ ಉಪಚರಿಸುವುದರಿಂದಆರಂಭಿಕ ಹಂತದಲ್ಲಿಕಂಡುಬರುವರೋಗ ಹಾಗೂ ಕೀಟಗಳ ಬಾಧೆಯನ್ನು ಪರಿಣಾಮಕಾರಿಯಾಗಿತಡೆಗಟ್ಟಬಹುದು. ಜೊತೆಗೆಜೈವಿಕ ಗೊಬ್ಬರಗಳ ಬಳಕೆಯು ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಿ ಸಸ್ಯಗಳಿಗೆ ಅಗತ್ಯ ಪೊ?ಷಕಾಂಶಗಳ ಲಭ್ಯತೆಯನ್ನು ಸುಧಾರಿಸುತ್ತದೆ.

ಹೆಸರು ಹಾಗೂ ಉದ್ದು ಬೆಳೆಗಳಿಗೆ ಪ್ರತಿಎಕರೆಗೆ ಬೇಕಾಗುವ ಬೀಜಕ್ಕೆಜೈವಿಕ ಗೊಬ್ಬರಗಳಾದ ರೈಜೋಬಿಯಂ ಮತ್ತುರಂಜಕಕರಗಿಸುವಅಣುಜೀವಿ ಗೊಬ್ಬರ (ಪಿ.ಎಸ್.ಬಿ.) ತಲಾ 200 ಗ್ರಾಂ ಪ್ರಮಾಣದಲ್ಲಿ ಮಿಶ್ರಣ ಮಾಡಿ ಬೀಜೋಪಚಾರ ಮಾಡಬೇಕು. ಇದರೊಂದಿಗೆಜೈವಿಕ ಶಿಲೀಂಧ್ರನಾಶಕವಾದ ಟ್ರೈಕೋಡರ್ಮಾವನ್ನು ಪ್ರತಿಎಕರೆಗೆ ಬೇಕಾಗುವ ಬೀಜಕ್ಕೆ 20 ಗ್ರಾಂ ಪ್ರಮಾಣದಲ್ಲಿಉಪಚರಿಸುವುದುಅತ್ಯಗತ್ಯವಾಗಿದೆ.

ರೈಜೋಬಿಯಂ ಅಣುಜೀವಿಗಳು ವಾತಾವರಣದಲ್ಲಿನ ಸಾರಜನಕವನ್ನು ಸ್ಥಿರೀಕರಿಸಿ ಸಸ್ಯಗಳಿಗೆ ಒದಗಿಸುತ್ತವೆ. ರಂಜಕ ಕರಗಿಸುವ ಅಣುಜೀವಿಗಳು ಮಣ್ಣಿನಲ್ಲಿಕರಗದ ರೂಪದಲ್ಲಿರುವರಂಜಕವನ್ನು ಕರಗಿಸಿ ಗಿಡಗಳಿಗೆ ಲಭ್ಯವಾಗುವಂತೆ ಮಾಡುತ್ತವೆ. ಟ್ರೈಕೋಡರ್ಮಾ ಬೇರು ಕೊಳೆತ ಸೇರಿದಂತೆ ವಿವಿಧ ಶಿಲೀಂಧ್ರಜನ್ಯ ರೋಗಗಳಿಂದ ಬೆಳೆಯನ್ನು ರಕ್ಷಿಸಲು ಸಹಕಾರಿಯಾಗುತ್ತದೆ.
ಇದಲ್ಲದೆ, ಬೆಳೆಗಳ ಆರಂಭಿಕ ಹಂತದಲ್ಲಿ ಹೆಚ್ಚಾಗಿ ಕಂಡುಬರುವರಸಹೀರುವ ಕೀಟಗಳಾದ ನುಸಿ ಹಾಗೂ ಜಿಗಿಜಾತಿ ಕೀಟಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲುರಾಸಾಯನಿಕ ಬೀಜೋಪಚಾರವೂಅಗತ್ಯವಾಗಿದೆ. ಇದಕ್ಕಾಗಿ ಪ್ರತಿಒಂದುಕಿಲೋಗ್ರಾಂ ಹೆಸರುಅಥವಾ ಉದ್ದಿನ ಬೀಜಕ್ಕೆಇಮಿಡಾಕ್ಲೋಪ್ರಿಡ್ 60 ಎಫ್.ಎಸ್. ಕೀಟನಾಶಕವನ್ನು 10 ಮಿಲಿ ಪ್ರಮಾಣದಲ್ಲಿ ಬೆರೆಸಿ ಬೀಜಗಳಿಗೆ ಸಮರ್ಪಕವಾಗಿ ಲೇಪಿಸಬೇಕು.

ಜೈವಿಕ ಹಾಗೂ ರಾಸಾಯನಿಕಗಳ ಸಂಯೋಜಿತ ಬೀಜೋಪಚಾರದಿಂದ ಬೀಜಗಳ ಮೊಳಕೆ ಪ್ರಮಾಣ ಹೆಚ್ಚುವುದರಜೊತೆಗೆ, ಸಸಿಗಳು ಆರೋಗ್ಯಕರವಾಗಿ ಬೆಳೆಯಲು ನೆರವಾಗುತ್ತದೆ. ರೋಗ ಹಾಗೂ ಕೀಟಗಳ ಬಾಧೆಕಡಿಮೆಯಾಗುವುದರಿಂದಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ರೈತ ಬಾಂಧವರು ಹೆಸರು ಹಾಗೂ ಉದ್ದು ಬೆಳೆಗಳಲ್ಲಿ ಈ ಸುಧಾರಿತ ಬೀಜೋಪಚಾರ ತಂತ್ರಜ್ಞಾನವನ್ನು ಕಡ್ಡಾಯವಾಗಿ ಅಳವಡಿಸಿಕೊಂಡು, ಉತ್ತಮಉತ್ಪಾದನೆ ಹಾಗೂ ಹೆಚ್ಚಿನಆದಾಯವನ್ನು ಪಡೆಯುವಂತೆ ಕೃಷಿ ತಜ್ಞರು ಮನವಿ ಮಾಡಿದ್ದಾರೆ.
ರೈತರಿಗಾಗಿ ಪ್ರಮುಖ ಶಿಫಾರಸುಗಳು : ರೈಜೋಬಿಯಂ–200 ಗ್ರಾಂ/ಎಕರೆಗೆಬೇಕಾಗುವಬೀಜಕ್ಕೆ, ರಂಜಕ ಕರಗಿಸುವ ಅಣುಜೀವಿಗೊಬ್ಬರ (PSB)–200 ಗ್ರಾಂ/ಎಕರೆಗೆ ಬೇಕಾಗುವಬೀಜಕ್ಕೆ, ಟ್ರೈಕೋಡರ್ಮಾ–20 ಗ್ರಾಂ/ಎಕರೆಗೆಬೇಕಾಗುವಬೀಜಕ್ಕೆ, ಇಮಿಡಾಕ್ಲೋಪ್ರಿಡ್ 60 ಎಫ್.ಎಸ್.–10 ಮಿ.ಲೀ./ಕೆ.ಜಿ. ಹೆಸರುಅಥವಾ ಉದ್ದಿನಬೀಜಕ್ಕೆ ಈ ಕ್ರಮಗಳನ್ನು ಅನುಸರಿಸುವ ಮೂಲಕ ಮುಂಗಾರು ಹಂಗಾಮಿನಲ್ಲಿಆರೋಗ್ಯಕರ ಬೆಳೆ ಹಾಗೂ ಅಧಿಕ ಇಳುವರಿ ಪಡೆಯಬೇಕು, ಹೆಚ್ಚಿನ ಮಾಹಿತಿಗಾಗಿಹಿರಿಯ ವಿಜ್ಞಾನಿ & ಮುಖ್ಯಸ್ಥರು, ಕೃಷಿ ವಿಜ್ಞಾನಕೇಂದ್ರ, ಬೀದರ ಇವರನು ದೂ.ಸಂ.9480696318ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾತ್ಸಲ್ಯ ಆಶ್ರಮದಲ್ಲಿ ಮಾಜಿ ಸಚಿವ ಎನ್.ಎಸ್. ಬೋಸರಾಜು ಹುಟ್ಟುಹಬ್ಬ: ಆಶ್ರಮಕ್ಕೆ ಸೂಕ್ತ ಸೂರು ಕಲ್ಪಿಸುವ ಭರವಸೆ ನೀಡಿದ ಶಾಸಕ ಜಿ. ಹಂಪಯ್ಯನಾಯಕ



ಧೈರ್ಯದ ದಾರಿ

**ಸಿರವಾರ, ಜೂನ್ 06**: ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಬೋಸರಾಜು ಅವರ ಹುಟ್ಟುಹಬ್ಬವನ್ನು ತಾಲೂಕಿನ ಮಾಡಗಿರಿ ಗ್ರಾಮದ 'ವಾತ್ಸಲ್ಯ ಆಶ್ರಮ'ದಲ್ಲಿ ಅನಾಥ ಮಕ್ಕಳು ಮತ್ತು ವೃದ್ಧರೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಯಿತು.
ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ. ಹಂಪಯ್ಯನಾಯಕ ಅವರು, ಆಶ್ರಮದ ನಿವಾಸಿಗಳೊಂದಿಗೆ ಕೇಕ್ ಕತ್ತರಿಸಿ, ಅಗತ್ಯವಿದ್ದ ದವಸ ಧಾನ್ಯಗಳನ್ನು ವಿತರಿಸಿದರು.
ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಜಿ. ಹಂಪಯ್ಯನಾಯಕ, "ನಮ್ಮ ಮಾರ್ಗದರ್ಶಕರು ಹಾಗೂ ರಾಜಕೀಯ ಗುರುಗಳಾದ ಎನ್.ಎಸ್. ಬೋಸರಾಜು ಅವರ ಹುಟ್ಟುಹಬ್ಬವನ್ನು ಆಶ್ರಮದಲ್ಲಿ ಆಚರಿಸುತ್ತಿರುವುದು ಸಂತಸ ತಂದಿದೆ. 80ನೇ ವಯಸ್ಸಿನಲ್ಲೂ ಅವರು ಕ್ಷೇತ್ರದ ಅಭಿವೃದ್ಧಿಗಾಗಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಅವರಿಗೆ ಸಚಿವ ಸ್ಥಾನ ಸಿಕ್ಕರೆ ಕ್ಷೇತ್ರ ಮತ್ತಷ್ಟು ಅಭಿವೃದ್ಧಿ ಕಾಣಲಿದೆ ಎಂಬ ನಿರೀಕ್ಷೆ ನಮಗಿದೆ," ಎಂದರು.
ಆಶ್ರಮಕ್ಕೆ ಕಟ್ಟಡದ ಭರವಸೆ:
ವಾತ್ಸಲ್ಯ ಸೇವಾಶ್ರಮದ ಅಧ್ಯಕ್ಷ ವೀರಭದ್ರಪ್ಪ ಅವರ ಸೇವಾ ಕಾರ್ಯವನ್ನು ಶ್ಲಾಘಿಸಿದ ಶಾಸಕರು, "ತಾಯಿ ಹೃದಯವಂತಿಕೆ ಇರುವವರು ಮಾತ್ರ ಇಂತಹ ಆಶ್ರಮಗಳನ್ನು ನಡೆಸಲು ಸಾಧ್ಯ. ಆಶ್ರಮಕ್ಕೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡುವ ಮೂಲಕ ನಾನು ಅಲ್ಪ ಸೇವೆ ಸಲ್ಲಿಸುತ್ತೇನೆ. ಗ್ರಾಮದಲ್ಲಿ ಉಚಿತವಾಗಿ ಜಾಗವನ್ನು ಗುರುತಿಸಿ ನೀಡಿದರೆ, ತಕ್ಷಣವೇ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು," ಎಂದು ಭರವಸೆ ನೀಡಿದರು.
ಈ ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷ ಬ್ರೀಜೇಶ ಪಾಟೀಲ್, ಯುವ ಮುಖಂಡರಾದ ವೈ. ಶರಣಯ್ಯನಾಯಕ, ಎಂ. ಶ್ರೀನಿವಾಸ್, ವಾತ್ಸಲ್ಯ ಸೇವಾಶ್ರಮದ ಅಧ್ಯಕ್ಷ ವೀರಭದ್ರಪ್ಪ ಮಾಡಗಿರಿ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಜಿ ಚೌದ್ರಿ, ಸದಸ್ಯರು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ಬೋಸರಾಜು ಅವರ ಅಭಿಮಾನಿಗಳು ಹಾಗೂ ಆಶ್ರಮದ ಮಕ್ಕಳು, ವೃದ್ಧರು ಉಪಸ್ಥಿತರಿದ್ದರು.

# ಸಿರವಾರ ಪಟ್ಟಣ ಪಂಚಾಯತ್‌ನಲ್ಲಿ ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಣೆ



ಧೈರ್ಯದ ದಾರಿ

**ಸಿರವಾರ:** ಪರಿಸರವನ್ನು ಉಳಿಸಿ, ಮುಂದಿನ ಪೀಳಿಗೆಗೆ ಹಸಿರು ಪರಿಸರವನ್ನು ಕೊಡುಗೆಯಾಗಿ ನೀಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಸಿರವಾರ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಹಾಜಿ ಚೌದ್ರಿ ಅವರು ಕರೆ ನೀಡಿದರು.
ಸ್ಥಳೀಯ ಪಟ್ಟಣ ಪಂಚಾಯತ್ ಕಾರ್ಯಾಲಯದ ಆವರಣದಲ್ಲಿ, ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.
ಕಾರ್ಯಕ್ರಮದ ಮುಖ್ಯಾಂಶಗಳು:
ಸಸಿ ನೆಡುವ ಅಭಿಯಾನ: ಕಾರ್ಯಕ್ರಮದ ಅಂಗವಾಗಿ ಪಟ್ಟಣ ಪಂಚಾಯತ್ ಆವರಣದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಡಲಾಯಿತು.
ಅಧ್ಯಕ್ಷರ ಸಂದೇಶ: "ಪರಿಸರ ಸಂರಕ್ಷಣೆ ಕೇವಲ ಒಂದು ದಿನದ ಆಚರಣೆಯಾಗಬಾರದು. ಪ್ರತಿಯೊಬ್ಬರೂ ತಮ್ಮ ಮನೆಗಳ ಮುಂದೆ ಅಥವಾ ಲಭ್ಯವಿರುವ ಜಾಗದಲ್ಲಿ ಸಸಿಗಳನ್ನು ನೆಟ್ಟು, ಅವುಗಳನ್ನು ಮರಗಳಾಗುವವರೆಗೆ ಪೋಷಿಸಬೇಕು. ಮರಗಳಿದ್ದರೇ ಮಾತ್ರ ಮನುಕುಲದ ಅಸ್ತಿತ್ವಕ್ಕೆ ಆಧಾರವಾದ ಶುದ್ಧ ಗಾಳಿ ಮತ್ತು ಮಳೆ ಪಡೆಯಲು ಸಾಧ್ಯ," ಎಂದು ಹಾಜಿ ಚೌದ್ರಿ ಅವರು ತಿಳಿಸಿದರು.
ಜಾಗೃತಿ: ಪರಿಸರ ಮಾಲಿನ್ಯವನ್ನು ತಡೆಗಟ್ಟಲು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವುದು ಮತ್ತು ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಅವಶ್ಯಕ ಎಂದು ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಕಿವಿಮಾತು ಹೇಳಿದರು.
ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು, ಪಟ್ಟಣ ಪಂಚಾಯತ್ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದು, ಪರಿಸರ ಸಂರಕ್ಷಣೆಯ ಪ್ರತಿಜ್ಞೆಯನ್ನು ಸ್ವೀಕರಿಸಿದರು.

# ಜಮೀರ್ ಖಾನ್ ಗೆ ಸಚಿವ ಸ್ಥಾನಕ್ಕೆ ಒತ್ತಾಯಿಸಿ– ಮುಸ್ಲಿಂ ಸಮುದಾಯದಿಂದ ಪ್ರತಿಭಟನೆ




**ಹೊಸಪೇಟೆ.ಜೂ.06** ಮಾಜಿ ಸಚಿವ ಹಾಗೂ ಶಾಸಕ ಬಿ.ಜೆಡ್.ಜಮೀರ್ ಅಹಮದ್ ಖಾನ್ ಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ, ನಗರದಲ್ಲಿ ಶುಕ್ರವಾರ ಮುಸ್ಲಿಂ ಸಮುದಾಯದಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಡಾ.ಪುನೀತ್ ರಾಜ್ ಕುಮಾರ್ ವೃತ್ತದಲ್ಲಿ ಶುಕ್ರವಾರ ಮುಸ್ಲಿಂ ಬಾಂಧವರು ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎನ್.ಮೊಹಮದ್ ಇಮಾಮ್ ನಿಯಾಜಿ ನೇತೃತ್ವದಲ್ಲಿ ಜಮೀರ್ ಅಹಮದ್ ಖಾನ್ ಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ರಸ್ತೆತಡೆ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹುಡಾ ಅಧ್ಯಕ್ಷ ಹೆಚ್.ಎನ್.ಮೊಹಮದ್ ಇಮಾಮ್ ನಿಯಾಜಿ, ರಾಜ್ಯದ ಮುಸ್ಲಿಂ ಸಮುದಾಯದ ಮುಖಂಡರಾದ ಜಮೀರ್ ಅಹಮದ್ ಖಾನ್, ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿ ಆಗಿದ್ದಾರೆ. ಪಕ್ಷ ಸಂಘಟನೆ, ಚುನಾವಣೆ ಸೇರಿದಂತೆ ತಮಗೆ ವಹಿಸಿದ ಪಕ್ಷದ ಎಲ್ಲಾ ಕೆಲಸಗಳನ್ನು ಉತ್ತಮವಾಗಿ ನಿಭಾಯಿಸಿ ಸಮರ್ಥ ನಾಯಕ ಎನಿಸಿಕೊಂಡಿದ್ದಾರೆ. ಎಲ್ಲಾ ಸಮಾಜದ ಬಡವರಿಗೂ ಆರ್ಥಿಕ ನೆರವು ನೀಡುವ ಮೂಲಕ ಎಲ್ಲಾ ಸಮಾಜದ ಮುಖಂಡರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಈ ಹಿನ್ನಲೆಯಲ್ಲಿ ಜಮೀರ್ ಅಹಮದ್ ಅವರಿಗೆ ಸಚಿವ ಸ್ಥಾನ ನೀಡುವ ಜೊತೆಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು. ಜಮೀರ್ ಅಹಮದ್ ಅವರಿಗೆ ಸಚಿವ ಸ್ಥಾನ ನೀಡದೆ ಹೋದರೆ ಅದು ಕಾಂಗ್ರೆಸ್ ಪಕ್ಷಕ್ಕೆ ನಷ್ಟವನ್ನುಂಟು ಮಾಡಲಿದೆ. ಈ ದೃಷ್ಟಿಯಿಂದ ಎರಡನೇ ಕಂತಿನ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಪಕ್ಷದ ಹೈಕಮಾಂಡನ್ನು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮುಸ್ಲಿಂ ಸಮುದಾಯದ ಮುಖಂಡರಾದ ಫಿರೋಜ್ ಖಾನ್, ಎಂ.ಎಂ.ಗೌಸ್, ಕೊತ್ವಾಲ್ ಮೋಸಿನ್, ಡಾ.ದರ್ವೇಶ್, ಅನ್ವರ್ ಬಾಷ, ಆಯತ್ ರಸೂಲ್, ದಾದಾಪೀರ್, ಎನ್.ಎಸ್.ರಫೀಕ್, ಸೈಯದ್ ಬುಡೇನ್, ಜಾವೀದ್ ಹುಸೇನ್, ನಾಸೀರ್ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

# ವೈಯಕ್ತಿಕ ನಡವಳಿಕೆ, ಶಿಸ್ತಿನಿಂದ ಪರಿಸರ ಸಂರಕ್ಷಣೆ ಸಾಧ್ಯ : ನ್ಯಾ. ಆರ್. ದೇವದಾಸ್




**ಕಲಬುರಗಿ, ಜೂ.06:** ಪರಿಸರ ಸಂರಕ್ಷಣೆ ಕೇವಲ ಗಿಡ ನೆಡುವುದಕ್ಕೆ ಸೀಮಿತವಾಗಿಲ್ಲ. ಅದು ನಮ್ಮ ವೈಯಕ್ತಿಕ ಸ್ವಚ್ಛತೆ ಹಾಗೂ ದಿನನಿತ್ಯದ ನಡವಳಿಕೆಯಿಂದ ಆರಂಭವಾಗಬೇಕು ಎಂದು ಕರ್ನಾಟಕ ಉಚ್ಚ ನ್ಯಾಯಾಲಯ ಗೌರವಾನ್ವಿತ ನ್ಯಾಯಮೂರ್ತಿ ಆರ್. ದೇವದಾಸ್ ಹೇಳಿದರು.

ಶುಕ್ರವಾರ ನಗರದ ಆದರ್ಶ ನಗರದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಗುಲಬರ್ಗಾ ಜಿಲ್ಲಾ ನ್ಯಾಯವಾದಿಗಳ ಸಂಘ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದರು. ಅದಕ್ಕೂ ಮುನ್ನ ಕರ್ನಾಟಕ ಉಚ್ಚ ನ್ಯಾಯಾಲಯ ಗೌರವ ನ್ಯಾಯಮೂರ್ತಿ ಆರ್. ದೇವದಾಸ್ ಅವರು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೊದಲು ನಮ್ಮ ದೇಹ, ಮನೆ ಹಾಗೂ ಶಾಲಾ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಜವಾಬ್ದಾರಿ ನಮ್ಮದಾಗಬೇಕು ಎಂದರು. ವಿವೇಕಾನಂದರ ಚಿಂತನೆಗಳನ್ನು ಸ್ಮರಿಸುತ್ತಾ, ಶಕ್ತಿಯುತ ದೇಹದಲ್ಲಿ ಶಕ್ತಿಯುತ ಮನಸ್ಸು ಇರುತ್ತದೆ. ಓದಿನ ಒತ್ತಡದ ನಡುವೆಯೂ ಮಕ್ಕಳಿಗೆ ಆಟ ಹಾಗೂ ವ್ಯಾಯಾಮ ಅತ್ಯಗತ್ಯ. ಮಕ್ಕಳಲ್ಲಿ ಸ್ವಚ್ಛತೆಯ ಪ್ರೇರಣೆ ಮೂಡಿಸಲು ಶೈಕ್ಷಣಿಕ ಪ್ರವಾಸಗಳ ಅಗತ್ಯವನ್ನು ಎಂದು ತಿಳಿಸಿದರು.

ಇದೇ ವೇಳೆ, ಶೈಕ್ಷಣಿಕ ಪ್ರವಾಸಗಳ ಮಹತ್ವವನ್ನು ಒತ್ತಿಹೇಳಿದ ಅವರು, ವಿದ್ಯಾರ್ಥಿಗಳನ್ನು ಬೇರೆ ನಗರಗಳ ಉತ್ತಮ ಶಿಸ್ತು ಹಾಗೂ ಸ್ವಚ್ಛತೆಯುಳ್ಳ ಶಿಕ್ಷಣ ಸಂಸ್ಥೆಗಳಿಗೆ ಕರೆದೊಯ್ಯಬೇಕು. ಅಲ್ಲಿನ ಪರಿಸರವನ್ನು ನೋಡಿದಾಗ ಮಕ್ಕಳಲ್ಲಿ ತಮ್ಮ ಶಾಲೆಯನ್ನು ಸ್ವಚ್ಛವಾಗಿಟ್ಟುಕೊಳ್ಳುವ ಪ್ರೇರಣೆ ಮೂಡುತ್ತದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿ.ಎಲ್. ಲಕ್ಷ್ಮೀನಾರಾಯಣ ಅವರು ಮಾತನಾಡಿ, ಪರಿಸರ ದಿನಾಚರಣೆಯನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ, ಹಸಿ ಕಸ-ಒಣ ಕಸದ ವಿಲೇವಾರಿ ಹಾಗೂ ಗಿಡಮರಗಳ ಪೋಷಣೆಯನ್ನು ನಿರಂತರವಾಗಿ ಮಾಡುವುದು ಪ್ರತಿಯೊಬ್ಬರ ಸಂವಿಧಾನಬದ್ಧ ಕರ್ತವ್ಯ ಎಂದು ಹೇಳಿದರು.

ಹಸಿರು ಕಣ್ಣಿನ ಆರೋಗ್ಯಕ್ಕೆ ಹಿತಕರವಾಗಿದ್ದು, ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ಬೆಳೆಸಬೇಕು. ಪೋಷಕರ ಕನಸಿನಂತೆ ಕಷ್ಟಪಟ್ಟು ಓದಿ, ಧ್ರುವನಂತೆ ದೃಢವಾದ ಗುರಿ ಇಟ್ಟುಕೊಂಡು ಉನ್ನತ ಹುದ್ದೆಗೇರುವುದೇ ಶಿಕ್ಷಕರಿಗೆ ನೀಡುವ ನಿಜವಾದ ಗುರುದಕ್ಷಿಣೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಮಾತನಾಡಿ, ಜಿಲ್ಲೆಯಲ್ಲಿ ಅರಣ್ಯ ಪ್ರದೇಶದ ಪ್ರಮಾಣವು ಶೇಕಡಾ 5 ಕ್ಕಿಂತಲೂ ಕಡಿಮೆಯಿದ್ದು, ಹಸಿರಿನ ಕೊರತೆಯಿಂದಾಗಿ ಬಿಸಿಲಿನ ತಾಪ ಹೆಚ್ಚಾಗುತ್ತಿದೆ. ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಪರಿಸರವನ್ನು ರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಕೇವಲ ಸಸಿ ನೆಡುವುದಷ್ಟೆ ಅಲ್ಲದೆ, ಸಾಲುಮರದ ತಿಮ್ಮಕ್ಕನವರಂತೆ ಗಿಡಗಳನ್ನು ದೈನಂದಿನ ನೀರುಣಿಸಿ ಪೋಷಿಸುವುದು ಮುಖ್ಯ. ಭವಿಷ್ಯದ ಪೀಳಿಗೆಯ ಆರೋಗ್ಯಕರ ಜೀವನಕ್ಕಾಗಿ ಕಾನೂನು ಸೇವೆಗಳ ಪ್ರಾಧಿಕಾರವು ಒಟ್ಟು 5 ಕೋಟಿ ಸಸಿಗಳನ್ನು ನೆಡುವ ಬೃಹತ್ ಯೋಜನೆಯನ್ನು ಹಮ್ಮಿಕೊಂಡಿದೆ ಎಂದು ತಿಳಿಸಿದರು.

ವಿಠ್ಠಲ್ ದೊಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿ, 1972 ರಿಂದ ವಿಶ್ವದಾದ್ಯಂತ ಪರಿಸರ ದಿನಾಚರಣೆಯನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಪರಿಸರ ಸಂರಕ್ಷಣೆ ನಮ್ಮ ಆದ್ಯತೆಯಾಗಬೇಕು. ಇಂದಿನ ವಿದ್ಯಾರ್ಥಿ ದೆಸೆಯಲ್ಲೇ ಪರಿಸರದ ಬಗ್ಗೆ ಕಾಳಜಿ ಮೂಡಿಸುವುದು ಅತ್ಯಂತ ಅವಶ್ಯಕವಾಗಿದೆ. ಪರಿಸರದ ರಕ್ಷಣೆಯಲ್ಲೇ ನಮ್ಮ ರಕ್ಷಣೆಯೂ ಅಡಗಿದೆ. ಅಲ್ಲದೆ, ಇಂದಿನ ದಿನಗಳಲ್ಲಿ ಲಕ್ಷಾಂತರ ಗಿಡಗಳನ್ನು ನೆಟ್ಟು ಬೆಳೆಸಿದ ಪರಿಸರ ಪ್ರೇಮಿ, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರ ಪರಿಸರ ಸೇವೆಯನ್ನು ನಾವೆಲ್ಲರೂ ಸದಾ ನೆನಪಿನಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಲಬುರಗಿ ಹೈಕೋರ್ಟಿನ್ ಅಪರ ಮಹಾವಿಲೇಖನಾಧಿಕಾರಿಗಳಾದ ಬಸವರಾಜ ಚೇಂಗಟಿ, ಹೆಚ್ಚುವರಿ ರಿಜಿಸ್ಟರ್ ಜುಡಿಡೀಷಿಯಲ್, ಕುಮಾರ ಡಿ.ಕೆ., ನ್ಯಾಯವಾದಿಗಳ ಸಂಘ ಅಧ್ಯಕ್ಷ ಎಸ್. ವಿ. ಪಸಾರ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಸುರೇಶ ಅಕ್ಕಣ್ಣ, ಕಲಬುರಗಿ ಉತ್ತರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ ಹಂಚಿನಾಳ, ವಲಯ ಅರಣ್ಯ ಅಧಿಕಾರಿ ಗುರುರಾಜ, ಆದರ್ಶ ನಗರ ಸರ್ಕಾರಿ ಪದವಿ ಪೂರ್ವ ಕಾಲೇಜು (ಕೆ.ಪಿ.ಎಸ್.)ಪ್ರಾಂಶುಪಾಲರು ರಾಜು ಗಂಗಾಧರ, ಕೆ.ಪಿ.ಎಸ್. ಎಂ.ಬಿ. ನಗರ ಎಸ.ಡಿ.ಎಂ.ಸಿ ಅಧ್ಯಕ್ಷ ರಾಮಚಂದ್ರ ಕಾಂಬಳೆ ಉಪಸ್ತಿತರಿದ್ದರು.

# ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ತಲುಪಿಸಿ : ಚೆನ್ನಪ್ಪ ಉಪ್ಪೆ




**ಔರಾದ್ :ಜೂ.6:** ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಮೂರು ವರ್ಷದ ಸಾಧನೆಗಳ ಕುರಿತು ಶುಕ್ರವಾರ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ತಾಲೂಕು ಮಟ್ಟದ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಚೆನ್ನಪ್ಪ ಉಪ್ಪೆ ಅವರ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಾಲೆಗಳು ಆರಂಭವಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಸಮಯಕ್ಕೆ ಸರಿಯಾಗಿ ಬಸ್ ವ್ಯವಸ್ಥೆ ಕಲ್ಪಿಸಬೇಕು.

ಅಲ್ಲದೆ, ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿಯನ್ನು

ಮತ್ತಷ್ಟು ಜನರಿಗೆ ತಲುಪಿಸುವ ಮೂಲಕ ಅರ್ಹ ಫಲಾನುಭವಿಗಳು ಯೋಜನೆಗಳ ಸದುಪಯೋಗ ಪಡೆಯುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ್ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರ ಜೀವನಮಟ್ಟ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂದರು.

ಸರ್ಕಾರದ ಜನಪರ ಯೋಜನೆಗಳ ಸೌಲಭ್ಯಗಳನ್ನು ಪ್ರತಿಯೊಬ್ಬ ಅರ್ಹ ವ್ಯಕ್ತಿಗೆ ತಲುಪಿಸುವ ಕಾರ್ಯವಾಗಬೇಕಿದೆ ಎಂದು ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ (ಗ್ರಾ.ಉ) ಶಿವಕುಮಾರ ಘಾಟೆ ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷ ಬಾಳಾಸಾಹೇಬ ಪಾಟೀಲ್, ಸದಸ್ಯರಾದ ಶಿವಕುಮಾರ ಪಾಟೀಲ್, ಶಂಕರ ಪಾಟೀಲ್, ಡಿಕೆ ಚಂದು, ಚೆನ್ನಬಸಪ್ಪ ಕೌಠಾ, ಕೃಷ್ಣಾ ಕಾಂಬಳೆ, ಸಲ್ಲಾವುದ್ದಿನ ಜಂಬಗಿ ಹಾಗೂ ಸಿಡಿಪಿಒ, ಕೆಇಬಿ, ಆಹಾರ ಇಲಾಖೆ, ಯುವನಿಧಿ, ಸಾರಿಗೆ ಇಲಾಖೆ ಅಧಿಕಾರಿಗಳು ಮತ್ತು ತಾಲೂಕು ಪಂಚಾಯತ್ ಸಿಬ್ಬಂದಿ ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ವಿದ್ಯಾರ್ಥಿಗಳು ಪರಿಸರ, ಜೀವ ಸಂಕುಲ ಸಂರಕ್ಷಣೆಯ ರೂವಾರಿಗಳು



**ಕಲಬುರಗಿ:ಜೂ.6:** ವಿದ್ಯಾರ್ಥಿಗಳು ಪರಿಸರ ಮತ್ತು ಜೀವ ಸಂಕುಲ ಸಂರಕ್ಷಣೆಯ ರೂವಾರಿಗಳಾಗಬೇಕು, ಜೀವವೈವಿದ್ಯತೆ ದಿನಾಚರಣೆ ಕೇವಲ ಆಚರಣೆಯ ದಿನಗಳಿಗೆ ಸೀಮಿತವಾಗದೆ ವರ್ಷವಿಡಿ ಪರಿಸರ ರಕ್ಷಣೆ ಮತ್ತು ಜೀವಿಗಳ ಸಂರಕ್ಷಣೆಯಲ್ಲಿ ಕ್ರಿಯಾಶೀಲತೆ ತೋರಬೇಕು ಎಂದು ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಹಾಗೂ ಪ್ರಾಣಿಶಾಸ್ತ್ರ ವಿಭಾಗದ ಸಂಯೋಜಕ ಪ್ರೊ ಜಿ. ಎಂ. ವಿಧ್ಯಾಸಾಗರ ಅಭಿಪ್ರಾಯಪಟ್ಟರು. ಗುಲಬರ್ಗಾ ವಿಶ್ವವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗ ಮತ್ತು ಪ್ರಾಣಿಶಾಸ್ತ್ರ ಸಂಘದ ನೇತೃತ್ವದಲ್ಲಿ ಡಾರ್ವಿನ್ ಸಭಾಂಗಣದಲ್ಲಿ ಆಯೋಜಿಸಿದ ಅಂತರಾಷ್ಟ್ರಿಯ ಜೀವವೈವಿದ್ಯತೆ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜೀವವೈವಿದ್ಯತೆಯಲ್ಲಿ ಆಸಕ್ತಿದಾಯಕ ವಿಸ್ಮಯಗಳಿವೆ. ಅವುಗಳ ಕುರಿತು ವೈಜ್ಞಾನಿಕ ಚಿಂತನೆ ಮೂಲಕ ದೂರದೃಷ್ಠಿ ಮನಸ್ಥಿತಿ ಬೆಳೆಸಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ಕೀಟಗಳು ಮಾನವನ ಆಹಾರ ಪದ್ಧತಿಯ ಮುಖ್ಯ ಭಾಗವಾಗಬಹುದು. ಮಾನವ ಕಲ್ಯಾಣಕ್ಕಾಗಿ ಆರೋಗ್ಯದಾಯಕ ಪರಿಸರ ಮತ್ತು ಜೀವ ವೈವಿಧ್ಯತೆಯನ್ನು ಪೋಷಿಸಬೇಕು ಎಂದರು.

ಪ್ರಾಣಿಶಾಸ್ತ್ರ ಸಂಘದ ಉಪಾಧ್ಯಕ್ಷ ಹಾಗೂ ಪ್ರಾಧ್ಯಾಪಕ ಡಾ. ಶಶಿಕಾಂತ ಮಜಗಿ ಪ್ರಾಸ್ತಾವಿಕ ಮಾತನಾಡಿ 'ಆಕ್ಟಿಂಗ್ ಲೋಕಲೀ ಫಾರ್ ಗ್ಲೋಬಲ್ ಇಂಪ್ಯಾಕ್ಟ್' ಜೀವವೈವಿದ್ಯತೆ ದಿನಾಚರಣೆ ಘೋಷವಾಕ್ಯವಾಗಿದೆ. ಜೀವ ವಿಜ್ಞಾನ ಜಗತ್ತು ವೈವಿಧ್ಯತೆಯಿಂದ ಕೂಡಿದೆ. ಜೀವಿಗಳ ವಂಶವಾಹಿ ಮತ್ತು ಪರಿಸರದಲ್ಲಿ ಪ್ರಾಣಿ, ಪಕ್ಷಿ, ಸಸ್ಯ ಮತ್ತು ಸೂಕ್ಷ್ಮಜೀವಿಗಳು ಸೊಗಸಾದ ಜಗತ್ತನ್ನು ಸೃಷ್ಟಿಸಿವೆ. ಎಲ್ಲಾ ಜೀವರಾಶಿಗಳಲ್ಲಿ ವೈವಿಧ್ಯತೆ ಕಾಣದಿದ್ದರೆ ಭೂಮಿ ಸುಂದರ ಮತ್ತು ವಿಸ್ಮಯಗಳ ಆಗರವಾಗಿರುತ್ತಿರಲಿಲ್ಲ. ಜೈವಿಕ ವಿಜ್ಞಾನ ಕ್ಷೇತ್ರದಲ್ಲಿನ ಸಂಶೋಧನೆಗಳಿಂದ ಸುಮಾರು 1.6 ರಿಂದ 1.8 ಮಿಲಿಯನ ಜೀವಿಗಳನ್ನು ಮಾತ್ರ ಗರುರುತಿಸಲು ಸಾದ್ಯವಾಗಿದೆ. ಇನ್ನು 45 ರಿಂದ 50 ಮಿಲಿಯನಷ್ಟು ಸಸ್ಯಗಳು, ಪ್ರಾಣಿಗಳು ಮತ್ತು ಸೂಕ್ಷ್ಮಜೀವಿಗಳು ಇವೇ ಎಂದು ಇತ್ತೀಚಿನ ಶೋಧನೆಗಳಿಂದ ಕಂಡು ಬಂದಿದೆ ಎಂದು ಅಂದಾಜಿಸಲಾಗಿದೆ. ಅವುಗಳ ವಿಶೇಷತೆ, ವೈವಿಧ್ಯತೆಗಳನ್ನು ಗ್ರಹಿಸುವ ಮೂಲಕ ನಾವೀನ್ಯ ಸಂಶೋಧನೆಗೆ ವಿದ್ಯಾರ್ಥಿಗಳು ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು.

ಪ್ರಾಣಿಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸಕಿ ಡಾ. ಸಂಧ್ಯಾ ದಿವಾಕರ ವೈವಿಧ್ಯತೆಯ ಕುರಿತು ಮಾತನಾಡಿದರು. ವಿದ್ಯಾರ್ಥಿಗಳಿಗಾಗಿ ಜೀವವೈವಿಧತೆ ಕುರಿತು ಬಾಷಣ ಸ್ಪರ್ಧೆ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಪ್ರೊ. ವಿಜಯಕುಮಾರ ಮಲಶೆಟ್ಟಿ, ಡಾ. ಶರಣಬಸಪ್ಪ ಪಾಟಿಲ, ಡಾ. ಪರಶುರಾಮ ಕಾಂಬಳೆ ಮತ್ತು ಡಾ. ಖಸಿಮ ಫಾತಿಮಾ ಹಾಗೂ ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕು. ಮಾಯಾವತಿ ಕಾರ್ಯಕ್ರಮ ನಿರೂಪಿಸಿದರು. ಭಾಗಪ್ಪ ಪ್ರಾರ್ಥಿಸಿದರು. ಶಿವಾನಿ ಸ್ವಾಗತಿಸಿದರು. ಭಾಗ್ಯಶ್ರೀ ವಂದಿಸಿದರು.

# ನಿಸರ್ಗದ ರಕ್ಷಣೆ ನಮ್ಮೆಲ್ಲರ ಹೊಣೆ: ಅನಿತಾ ವಳಕೇರಿ



**ಕಲಬುರಗಿ. ಜೂ. 6–** ಪ್ರತಿ ಮನೆಗೊಂದು ಸಸಿ ನೆಡುವದು ಪ್ರತಿಯೊಬ್ಬರ ಆದ್ಯ ಕರ್ತವ್ಯ. ಹಾಳಾಗುತ್ತಿರುವ ಪ್ರಕೃತಿಯನ್ನು ಉಳಿಸಿಕೊಳ್ಳುವುದು ಇಂದಿನ ಯುವಕರ ಜವಾಬ್ದಾರಿಯಾಗಿದೆ. ಪ್ರತಿಯೊಬ್ಬರೂ ಸಸಿ ನೆಟ್ಟು ನಿಸರ್ಗವನ್ನು ಕಾಪಾಡಿಕೊಂಡು ಹೋಗಬೇಕೆಂದು ಜಿ. ಪಂ. ಮಾಜಿ ಉಪಾಧ್ಯಕ್ಷರು ಅನಿತಾ ಪವನಕುಮಾರ ವಳಕೇರಿ ಹೇಳಿದರು.

ನಗರದ ಹೊರವಲಯದಲ್ಲಿರುವ ತೇಲ್ಕರ್ ಬಡಾವಣೆ ನಂದಿಕೂರ್ ಭಾರತ ಸೇವಾದಳದ ಕಲ್ಬುರ್ಗಿ ಜಿಲ್ಲಾ ಘಟಕ ಹಾಗೂ ಶ್ರೀ ವೆಂಕಟಗಿರಿ ಗ್ರಾಮೀಣಾಭಿವೃದ್ಧಿ ಸೌಹಾರದ ಸಹಕಾರ ನಿಯಮಿತ ( ರಿ ) ಹಮ್ಮಿಕೊಂಡಿರುವ ವಿಶ್ವ ಪರಿಸರ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ ಬಡಿಗೇರ, ಮುಂದಿನ ಭವಿ ಷ್ಯತ್ತನಲ್ಲಿ ಆಮ್ಲಜನಕದ ಕೊರತೆ ಉಂಟಾಗಬಹುದು. ಈಗಲೇ ನಾಗರಿಕ ಸಮಾಜ ಎಚ್ಚೆತ್ತುಕೊಂಡು ಅತಿ ಹೆಚ್ಚು ಸಸಿಗಳನ್ನು ನೆಡುದರೊಂದಿಗೆ ಕಾಡನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬರ ಆಧ್ಯ ಕರ್ತವ್ಯವಾಗಿದೆ ಎಂದು ಹೇಳಿದರು. ಸಮಾರಂಭದ ಅಧ್ಯಕ್ಷತೆಯನ್ನುವಹಿಸಿ ಮಾತನಾಡಿದ ನಂದಿಕೂರು ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷ ಪವನಕುಮಾರ ಬಿ ವಳಕೇರಿಯವರು, ಕಾಡು ಮತ್ತು ನಾಡು ಒಂದೇ ನಾಣ್ಯದ ಎರಡು ಮುಖಗಳು. ನಾವು ವಾಸಿಸುವ ನಾಡನ್ನು ಎಷ್ಟು ಜವಾಬ್ದಾರಿಯಿಂದ ರಕ್ಷಣೆ ಮಾಡುತ್ತೇವೆಯೋ ಅಷ್ಟೇ ಜಾಣ್ಮೆಯಿಂದ ಕಾಡನ್ನು ಸಹ ರಕ್ಷಣೆ ಮಾಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ಶ್ರೀ ಶಿವಲಿಂಗ ಶರಣರು ನಂದಿಕೂರ ಶಿಸಾನಿಧ್ಯ , ಭಾರತ ಸೇವಾದಳದ ಜಿಲ್ಲಾ ಸಂಘಟಿಕರಾದ ಚಂದ್ರಶೇಖರ ಜಮಾದಾರ, ಶ್ರೀಮತಿ ರೇಣುಕಾದೇವಿ ಗಣಪತಿ ಬದಲಾದ ಮಾಜಿ ಅಧ್ಯಕ್ಷರು ಗ್ರಾ ಪಂ ಬಬಲಾದ ( IK ), ಲಕ್ಷ್ಮಣ ಪೂಜಾರಿ, ಹೂವಣ್ಣ ಗೌಡ, ಶಾಖಿಲ್ ಉತ್ತನಾಳ, ಸಂಧ್ಯಾಕಿರಣ ವರುಣ, ವೈಭವ ಬಬಲಾದ, ಅಂಜುಬಾಯಿ ಚವ್ಹಾಣ , ವಿಠ್ಠಬಾಯಿ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗ್ರಾಹಕರು ಕಳೆದುಕೊಂಡ 1,00,000 ಹಣ ಮರಳಿಸಿದ ಬ್ಯಾಂಕಿನ ಸಿಬ್ಬಂದಿ



**ವಿಜಯಪುರ, ಜೂ. 6 :** ಇಲ್ಲಿನ ಜಲನಗರ ಎಸ್. ಬಿ. ಐ ಬ್ಯಾಂಕ್ ಶಾಖೆಯಲ್ಲಿ ಗ್ರಾಹಕರೊಬ್ಬರು ಕಳೆದುಕೊಂಡಿದ್ದ 1 ಲಕ್ಷ ಹಣವನ್ನು ಬ್ಯಾಂಕ್ ಸಿಬ್ಬಂದಿ ತಕ್ಷಣವೇ ಪತ್ತೆ ಹಚ್ಚಿ ನೊಂದ ಗ್ರಾಹಕರಿಗೆ ಮರಳಿಸಿ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಸಾಮಾನ್ಯ ಬ್ಯಾಂಕಿಂಗ್ ವ್ಯವಹಾರದ ಸಮಯದಲ್ಲಿ, ಗ್ರಾಹಕ ಆಲಮೇಲ ತಾಲೂಕಿನ ತಾವರಖೇಡ ಗ್ರಾಮದ ಪ್ರಗತಿಪರ ರೈತ ಯಲಗೊಂದಿ ಕಣ್ಣಪ್ಪ, ಶಿವನಗೌಡ ತಾವರಖೇಡ ಅವರು ಶಾಖೆಯಿಂದ ಹಿಂಪಡೆಯಲಾದ ಒಂದು ಲಕ್ಷ ಹಣವನ್ನು ಫೇಸಮಾಸ್ಕ್ ಧರಿಸಿದ ಅಪರಿಚಿತ ಮಹಿಳೆಯೊಬ್ಬರು ಕದ್ದಿದ್ದಾರೆ ಎಂದು ದೂರು ನೀಡಿದ್ದರು.

ದೂರು ಸ್ವೀಕರಿಸಿದ ತಕ್ಷಣ, ಶಾಖೆಯು ಸಿಸಿಟಿವಿ ದೃಶ್ಯಾವಳಿಗಳ ವಿವರವಾದ ಪರಿಶೀಲನೆಯನ್ನು ಬ್ಯಾಂಕಿನ ವ್ಯವಸ್ಥಾಪಕ ಪ್ರಕಾಶ್ ಗದಿಗೆಣ್ಣವರ ನೇತೃತ್ವದಲ್ಲಿ ಕೈಗೊಂಡು ಸಿಸಿ ಕ್ಯಾಮೆರಾ ಪುಟೇಜ್ ಪರಿಶೀಲನೆ ನಡೆಸಿದ್ದಾರೆ. ಆಗ ಮಹಿಳೆಯೊಬ್ಬಳು ಹಣ ಲಪಟಾಯಿಸಿರುವುದು ಬೆಳಕಿಗೆ ಬಂದಿದೆ. ಆ ಮಹಿಳೆ ಬ್ಯಾಂಕಿಗೆ ಕೆ ವೈ ಸಿ ಮಾಡಿಸಲು ಬಂದಿದ್ದಳು. ಹಣ ಲಪಟಾಯಿಸುವ ಭರದಲ್ಲಿ ಮಹಿಳೆ ತನ್ನ ಆಧಾರ ಕಾರ್ಡ್ ಮರೆತು ಹೋಗಿದ್ದಳು. ಆಧಾರ ಕಾರ್ಡ್ ನಲ್ಲಿ ಇರುವ ಆ ಮಹಿಳೆಗೆ ಬ್ಯಾಂಕ್ ಸಿಬ್ಬಂದಿ ಫೋನ್ ಮಾಡಿ ಕಳುವು ಮಾಡಿದ ಹಣ ಮರಳಿಸಬೇಕು. ಇಲ್ಲದಿದ್ದರೆ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಬೇಕಾಗುತ್ತದೆ ಎಂದು ಹೇಳಿದ್ದಾರೆ. ಆಗ ಮಹಿಳೆ ತಕ್ಷಣವೇ ಬ್ಯಾಂಕಿಗೆ ಬಂದು ಕಳವು ಮಾಡಿದ ಹಣ ಮರಳಿಸಿದ್ದಾಳೆ.

ಶಾಖೆಯ ಸಿಬ್ಬಂದಿಗಳಾದ ಸಚಿನ್ ಎಸ್. ಕೆ., ಮತ್ತು ಅಮಿತ್ ಚಲವಾದಿ ಅವರ ಸಕ್ರಿಯ ಸಹಾಯದಿಂದ ತನಿಖೆಯನ್ನು ನಡೆಸಲಾಯಿತು.

ಸಿಸಿಟಿವಿ ವಿಶ್ಲೇಷಣೆ ಮತ್ತು ತ್ವರಿತ ಅನುಸರಣಾ ಕ್ರಮದ ಆಧಾರದ ಮೇಲೆ, ಕಳುವಾದ ಒಂದು ಲಕ್ಷ ಮೊತ್ತವನ್ನು ಯಶಸ್ವಿಯಾಗಿ ಪತ್ತೆಹಚ್ಚಿ ಮರುಪಡೆಯಲಾಗಿದೆ. ಸಂಪೂರ್ಣ ಮರುಪಡೆಯಲಾದ ಮೊತ್ತವನ್ನು ನಂತರ ಶಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಶಾಖೆಯ ಆವರಣದಲ್ಲಿ ಗ್ರಾಹಕರಿಗೆ ಹಸ್ತಾಂತರಿಸಲಾಯಿತು.ಕಳೆದುಹೋದ ಮೊತ್ತವನ್ನು ಮರುಪಡೆಯಲು ಮತ್ತು ಹಿಂದಿರುಗಿಸಲು ಶಾಖೆಯ ವ್ಯವಸ್ಥಾಪಕರು ಹಾಗೂ ಸಿಬ್ಬಂದಿ ತೆಗೆದುಕೊಂಡ ತ್ವರಿತ ಕ್ರಮಕ್ಕಾಗಿ ಗ್ರಾಹಕರು ತಮ್ಮ ಕೃತಜ್ಞತೆ ಮತ್ತು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

# ಅಭಿನಂದನಾ ಸಮಾರಂಭ



**ಚನ್ನಮ್ಮನ ಕಿತ್ತೂರ, ಜೂ6:** ಸಮಾಜಕ್ಕೆ ಜ್ಞಾನ ನೀಡುವ ಶಿಕ್ಷಕರ ವೃತ್ತಿ ಅತ್ಯಂತ ಗೌರವಯುತ ಶ್ರೇಷ್ಠ ವೃತ್ತಿಯಾಗಿದೆ. ವೃತ್ತಿಯಲ್ಲಿದ್ದವರು ನಿವೃತ್ತಿ ಎಂಬುವುದು ಅನಿವಾರ್ಯವಾದದ್ದು ಸೇವಾವಧಿಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವುದು ಮುಖ್ಯವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಚನ್ನಬಸಪ್ಪ ತುಬಾಕಿ ಹೇಳಿದರು.

ತಾಲೂಕಿನ ದೇವಗಾಂವ ಗ್ರಾಮದ ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಮುಖ್ಯೋಪಾಧ್ಯಾಯ ಸದಾಶಿವ ಲಕ್ಷ ಣ ಪೋಳ ಹಾಗೂ ಸಹ ಶಿಕ್ಷಕಿ ಸ್ವರ್ಣಲತಾ .ಸಂ. ಹಾಲಗೇರಿ ಇವರ ಸೇವಾ ನಿವೃತ್ತಿ ಅಭಿನಂದನಾ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು. "ನದಿ ತನ್ನ ಉಗಮ ಸ್ಥಾನದಿಂದ ಹರಿದು ಸಾಗರವನ್ನು ಸೇರುವಂತೆ ಪ್ರತಿಯೊಬ್ಬ ಸರ್ಕಾರಿ ನೌಕರನಿಗೂ ನಿವೃತ್ತಿ ಸಹಜ. ಶಿಕ್ಷಣ ಕ್ಷೇತ್ರದಲ್ಲಿ ಅಮೂಲ್ಯ ಸೇವೆ ಸಲ್ಲಿಸಿ ಇಂದು ಈ ಇಬ್ಬರು ಶಿಕ್ಷಕರು ಈ ಶಾಲೆಯ ಏಳಿಗೆಗೆ ತಮ್ಮ ಶಕ್ತಿ ಮೀರಿ ಶ್ರಮಿಸಿದ್ದಾರೆ. ತಮ್ಮ ಸುಧೀರ್ಘ ಸೇವೆಯನ್ನು ಯಶಸ್ವಿಗೊಳಿಸಿದ್ದಾರೆ. ವಿದ್ಯಾರ್ಥಿಗಳಿಗೆ ರಚನಾತ್ಮಕವಾಗಿ ಶಿಕ್ಷಣ ಕಲಿಸುವ ಮೂಲಕ ಈ ಇಬ್ಬರು ಶಿಕ್ಷಕರು ಮಕ್ಕಳ ಹಾಗೂ ಸಾರ್ವಜನಿಕರ, ಶಿಕ್ಷಣ ಇಲಾಖೆಗೆ ಮೆಚ್ಚುಗೆ ಪಾತ್ರರಾಗಿದ್ದಾರೆ. ಇವರ ನಿವೃತ್ತಿ ಮುಂದಿನ ಜೀವನ ಉತ್ತಮವಾಗಿ ಸಾಗಲಿ ಎಂದು ಆಶಿಸಿದರು.

ತಮ್ಮ ಸೇವಾ ನಿವೃತ್ತಿ ಕುರಿತು ಪೋಳ ಮತ್ತು ಹಾಲಗೇರಿ ಅವರು ತಮ್ಮ ಅನಿಸಿಕೆ ಹಂಚಿಕೊಂಡರು. ತಮ್ಮ ಸುಧೀರ್ಘ ಶಿಕ್ಷಣ ಸೇವೇ ಸಲ್ಲಿಸಿ ಹಲವಾರು ವಿದ್ಯಾರ್ಥಿಗಳಿಗೆ ಅಕ್ಷರಜ್ಞಾನ ಎರೆದು ದೇಶಕ್ಕೆ ಕೊಡುಗೆ ನೀಡಿ ನಿವೃತ್ತಿಯಾದ ಸದಾಶಿವ ದಂಪತಿಗಳು ಹಾಗೂ ಸುರ್ಣಲತಾ ಹಾಲಗೇರಿ ಇವರನ್ನು ಶಿಕ್ಷಕರು, ಸಾರ್ವಜನಿಕರು ಸೇರಿದಂತೆ ಇನ್ನಿತರರು ಸತ್ಕರಿಸಿ ಅದ್ದೂರಿಯಿಂದ ಬಿಳ್ಕೊಟ್ಟರು.

ಶಿಕ್ಷಣ ಸಂಯೋಜಕರಾದ ಎಸ್.ಎಂ.ಶಹಾಪೂರಮಠ, ಬಿ.ಆರ್ ಪಿ. ಎಂ.ವಾಯ್. ಕಡಕೋಳ, ಸಿಆರ್ಪಿ ಸಂಜೀವ ಹುಬ್ಬಳ್ಳಿ, ರಮೇಶ ಉಗರಖೋಡ, ಪತ್ರಕರ್ತ ಕಲ್ಲಪ್ಪ ದೇಗಲೋಳ್ಳಿ(ಅಗಸಿಮನಿ) ಮಾತನಾಡಿದರು. ಎಸ್ಡಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಇಟ್ನಾಳ ಸಭೆ ಅಧ್ಯಕ್ಷತೆವಹಿಸಿದ್ದರು. ದೈಹಿಕ ಶಿಕ್ಷಕ ನಾಗಪ್ಪ ಕೇರವಾಡ, ಗ್ರಾಪಂ ಸದಸ್ಯರು, ವಿವೇಕ ದುಗ್ಗಾಣಿ, ಅದೃಶ್ಯ ಪತ್ತಾರ, ವಿಠ್ಠಲ್ ಸಬ್ಬನೀಸ್, ಪ್ರಕಾಶ ಕಡತಾಳ, ಲಕ್ಷ್ಮಿ ಗಂದಿಗವಾಡ, ಎಸ್ಡಿಎಂಸಿ ಮತ್ತು ಗ್ರಾಪಂ ಸರ್ವಸದಸ್ಯರು, ಸಹ ಶಿಕ್ಷಕ-ಶಿಕ್ಷಕಿಯರು, ಗ್ರಾಮಸ್ಥರು, ಮಕ್ಕಳು, ಶಿಕ್ಷಣ ಪ್ರೇಮಿಗಳು, ಇನ್ನಿತರರಿದ್ದರು. ಶಿಕ್ಷಕಿ ತನುಜಾ ತೆಂಬದಮನಿ, ಮಂಜುಳಾ ಬಾರ್ಕಿ ನಿರೂಪಿಸಿದರು, ಶಿಕ್ಷಕಿ ಚವ್ಹಾಣ ಸ್ವಾಗತಿಸಿದರು. ಶಿಕ್ಷಕ ರಾಘವೇಂದ್ರ ಹೊಂಬಳ, ವಂದಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

# ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ರಕ್ಷಿಸಿ : ಅಣ್ಣಾಸಾಬ ತೆಲಸಂಗ




**ಅಥಣಿ :ಜೂ.6:** ಭೂಮಿಯ ಮೇಲೆ ಬದುಕುವ ಪ್ರತಿಯೊಂದು ಜೀವಿಗೆ ಬೆಳಕು, ನೀರು, ಗಾಳಿ, ಆಹಾರ ಮುಖ್ಯವಾಗಿವೆ. ಎಲ್ಲ ಪ್ರಾಣಿಗಳಲ್ಲಿ ಬುದ್ಧಿವಂತನಾಗಿರುವ ಮನುಷ್ಯ ತನ್ನ ಆಮಿಷಕ್ಕೆ ಅರಣ್ಯ ಸಂಪತ್ತನ್ನು ನಾಶ ಮಾಡುತ್ತಿದ್ದಾನೆ. ಇದರಿಂದ ಮುಂದಿನ ದಿನಗಳಲ್ಲಿ ಪರಿಸರದಲ್ಲಿ ಅಸಮತೋಲನ ಉಂಟಾಗಲಿದ್ದು, ಮುಂದೊಂದು ದಿನ ಆಕ್ಸಿಜನ್ ( ಶುದ್ಧ ಗಾಳಿ ) ಕೊರತೆ ಆಗಬಹುದು, ಆದ್ದರಿಂದ ನಾವೆಲ್ಲ ಎಚ್ಚೆತ್ತುಕೊಂಡು ಈಗಿನಿಂದಲೇ ಗಿಡಮರಗಳನ್ನು ನೆಟ್ಟು ಸಂರಕ್ಷಣೆ ಮಾಡುವುದು ಅಗತ್ಯ ಎಂದು ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಣ್ಣಾಸಾಬ ತೆಲಸಂಗ ಹೇಳಿದರು.

ಅವರು ಪಟ್ಟಣದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ನಂ. 01 ರಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶಾಲೆಯ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭೂಮಿ ಇದ್ದಷ್ಟೇ ಇದ್ದು, ದಿನದಿಂದ ದಿನಕ್ಕೆ ಜನಸಂಖ್ಯೆ ಹೆಚ್ಚಾಗುತ್ತಿದೆ. ನಮ್ಮ ಸುತ್ತಮುತ್ತಲಿನ ಪರಿಸರ ಮತ್ತು ಅರಣ್ಯಗಳನ್ನು ನಾಶ ಮಾಡಿ ಅನೇಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಮುಂಬರುವ ದಿನಗಳಲ್ಲಿ ಹವಾಮಾನದ ವೈಪರಿತದಿಂದ ಮನುಷ್ಯ ಸೇರಿದಂತೆ ಪ್ರಾಣಿ ಸಂಕುಲಕ್ಕೆ ಸಂಕಷ್ಟ ಎದುರಾಗಲಿದೆ. ಆದ್ದರಿಂದ ಪ್ರತಿಯೊಬ್ಬರೂ ಗಿಡಮರಗಳನ್ನು ಬೆಳೆಸಬೇಕು. ಶಾಲಾ ಹಂತದಲ್ಲಿ ಮಕ್ಕಳಿಗೆ ಪರಿಸರ ಸಂರಕ್ಷಣೆಯ ಮಹತ್ವವನ್ನ ತಿಳಿಸುವುದು ಇಂದಿನ ಅಗತ್ಯವಾಗಿದೆ ಎಂದರು. ಶಾಲಾ ಮಕ್ಕಳಿಗೆ ಸಸಿಗಳನ್ನು ವಿತರಿಸಿದ

ಅಥಣಿ ತಾಲೂಕಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್ ಎಸ್ ಹೂಟಿ ಮಾತನಾಡಿ ಪರಿಸರ ದಿನಾಚರಣೆ ಕೇವಲ ಫೋಟೋ ಪ್ರದರ್ಶನ ಮತ್ತು ಅಭಿಯಾನಕ್ಕೆ ಸೀಮಿತವಾಗಬಾರದು. ಶಾಲಾ ಹಂತದಲ್ಲಿ ಮಕ್ಕಳಿಗೆ ಗಿಡಮರಗಳು ಮತ್ತು ಅರಣ್ಯದ ಮಹತ್ವವನ್ನ ತಿಳಿಸುವುದರ ಜೊತೆಗೆ ಗಿಡಗಳನ್ನನು ಬೆಳೆಸಲು ಪ್ರೋತ್ಸಾಹಿಸಬೇಕ. ಶಾಲೆಯ ಆವರಣದಲ್ಲಿ ಮಕ್ಕಳಿಗೆ ಮತ್ತು ವರ್ಗ ಶಿಕ್ಷಕರಿಗೆ ವರ್ಷಪವಿಡೀ ಗಿಡಗಳ ಪೋಷಣೆ ಮಾಡಲು ದತ್ತು ನೀಡಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಎಸ್ ಬಿ ಕಟಗೇರಿ ಮಾತನಾಡಿ ಪರಿಸರ ದಿನಾಚರಣೆಯ ಮಹತ್ವವನ್ನ ತಿಳಿಸಿದರು. ಈ ಸಂದರ್ಭದಲ್ಲಿ ಕೆ ಬಿ ಶಿರಗೂರ, ವೈ ಎಂ ನಡುವಿನಮನಿ, ಎಸ್ ಬಿ ಕೆಮ್ಮನ್ನವರ, ಬಿ ಎಂ ಅನಂತಪುರ, ಪಿ ಆರ್ ಬಸಗೌಡರ, ಎ ಪಿ ಬಡಕಂಬಿ ಸೇರಿದಂತೆ ಇನ್ನೀತರರು ಉಪಸ್ಥಿತರಿದ್ದರು.

# ಅಗ್ರ ಶ್ರೇಣಿಯಲ್ಲಿ ಉತ್ತೀರ್ಣರಾದ ಎಸ್ಸೆಸ್ಸೆಲ್ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನ




**ಔರಾದ್ :ಜೂ.6:** ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅಗ್ರ ಶ್ರೇಣಿಯಲ್ಲಿ ಉತ್ತೀರ್ಣರಾದ ಔರಾದ-ಕಮಲನಗರ ತಾಲ್ಲೂಕುಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶುಕ್ರವಾರ ಶಾಸಕ ಪ್ರಭು ಬಿ.ಚವ್ಹಾಣ ಅವರು ಸನ್ಮಾನಿಸಿದರು.

ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯ ತಾಲ್ಲೂಕಿನ ಪ್ರಥಮ ಟಾಪರ್‌ಳಿಗೆ 21,000, ದ್ವಿತೀಯ ಟಾಪರ್‌ಗಳಿಗೆ 11,000 ಹಾಗೂ ತೃತೀಯ ಟಾಪರ್‌ಗಳಿಗೆ 7,000 ನಗದು ಬಹುಮಾನ ನೀಡಿದರಲ್ಲದೇ ಮತ್ತು ಶೇ.80ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಉಡುಗೊರೆಯ ಜೊತೆಗೆ ಸಸಿ ನೀಡುವ ಮೂಲಕ ವಿದ್ಯಾರ್ಥಿಗಳಿಗೆ ಸ್ಪೂರ್ತಿ ತುಂಬಿದರು. ವಿದ್ಯಾರ್ಥಿಗಳ ಸಾಧನೆಗೆ ಪ್ರೋತ್ಸಾಹ ನೀಡಿದ ಅವರು ಪಾಲಕರು ಮತ್ತು ಶಾಲೆಯ ಮುಖ್ಯಗುರುಗಳಿಗೆ ಮತ್ತು ಶೇ.100 ಫಲಿತಾಂಶ ದಾಖಲಿಸಿದ ಶಾಲೆಗಳ ಮುಖ್ಯಗುರುಗಳಿಗೆ ವಿಶೇಷ ಸನ್ಮಾನ ನೀಡಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಪ್ರಭು ಬಿ.ಚವ್ಹಾಣ ಅವರು, ವಿದ್ಯಾರ್ಥಿಗಳು ಅಂಕಗಳ ಜೊತೆಗೆ ಉತ್ತಮ ಸಂಸ್ಕಾರಗಳನ್ನು ರೂಢಿಸಿಕೊಳ್ಳಬೇಕು. ತಂದೆ-ತಾಯಿಗೆ ಗೌರವ ನೀಡಬೇಕು, ಶಿಕ್ಷಕರ ಮಾರ್ಗದರ್ಶನವನ್ನು ಪಾಲಿಸಬೇಕು. ಶಿಕ್ಷಣದ ಜೊತೆಗೆ ಆಟೋಟ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಭಾಗವಹಿಸಿ ಸರ್ವತೋಮುಖ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ನಮ್ಮ ಕ್ಷೇತ್ರದ ಮಕ್ಕಳು ಡಿಸಿ, ಎಸಿ, ತಹಸೀಲ್ದಾರ್, ವೈದ್ಯರು, ಎಂಜಿನಿಯರ್‌ಗಳು ಸೇರಿದಂತೆ ಉನ್ನತ ಅಧಿಕಾರಿಗಳಾಗಿ ಸಮಾಜದಲ್ಲಿ ಗುರುತಿಸಿಕೊಳ್ಳಬೇಕು. ಎಲ್ಲಿಯಾದರೂ ಹೋದಾಗ ನಾನು ಔರಾದ(ಬಿ) ಕ್ಷೇತ್ರದವನು ಎಂದು ಹೆಮ್ಮೆಯಿಂದ ಹೇಳುವಂತಹ ಸಾಧನೆ ಮಾಡಬೇಕು. ನನಗೆ ಅದಕ್ಕಿಂತ ದೊಡ್ಡ ಸೌಭಾಗ್ಯ ಮತ್ತೊಂದಿಲ್ಲ ಎಂದು ಹೇಳಿದರು. ನಾನು ನಾಲ್ಕು ಲಕ್ಷ ಜನರ ಸೇವಕ. ಕ್ಷೇತ್ರದ ಪ್ರತಿಯೊಬ್ಬ ವಿದ್ಯಾರ್ಥಿಯ ಯಶಸ್ಸು ನನ್ನ ಹೆಮ್ಮೆ. ನೀವು ಸರಿಯಾದ ದಿಕ್ಕಿನಲ್ಲಿ ಅಭ್ಯಾಸ ಮಾಡಿ ಮುಂದೆ ಬರಬೇಕು. ಶಿಕ್ಷಣ ಅಥವಾ ಇತರ ಯಾವುದೇ ಸಮಸ್ಯೆಗಳಿದ್ದರೆ ಹಿಂಜರಿಯದೆ ತಿಳಿಸಿ, ನಾನು ನಿಮ್ಮೊಂದಿಗೆ ಇದ್ದೇನೆ" ಎಂದು ಭರವಸೆ ನೀಡಿದರು.

ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಮುಖ್ಯವಾಗಿರುವ ಶಿಕ್ಷಣದ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ಕೊಟ್ಟಿದ್ದು, ಅದರಂತೆ ಎಲ್ಲ ಗ್ರಾಮಗಳಲ್ಲಿ ಶಾಲೆ, ಅಂಗನವಾಡಿ ಕೇಂದ್ರಗಳನ್ನು ತೆರೆದಿದ್ದೇನೆ. ಪಿಯುಸಿ, ಪದವಿ, ಐಟಿಐ, ಡಿಪ್ಲೋಮಾ ಕಾಲೇಜನ್ನು ತಂದಿದ್ದು, ಬೇಡಿಕೆಗೆ ಅನುಗುಣವಾಗಿ ಎಲ್ಲ ಕಡೆಗಳಲ್ಲಿ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ, ಡಾ.ಬಿ.ಆರ್ ಅಂಬೇಡ್ಕರ್ ವಸತಿ ಶಾಲೆಗಳು, ವಸತಿ ನಿಲಯಗಳನ್ನು ನಿರ್ಮಿಸುತ್ತಿದ್ದೇನೆ. 2008ರ ನಂತರ ಸಾಕಷ್ಟು ಪ್ರಗತಿ ಸಾಧಿಸಲಾಗಿದೆ. ಗ್ರಾಮ ಸಂಚಾರದ ಸಂದರ್ಭದಲ್ಲಿ ಪ್ರತಿ ಶಾಲೆಗೆ ಭೇಟಿ ನೀಡುತ್ತೇನೆ. ಕೊರತೆಗಳಿದ್ದರೆ ಸರಿಪಡಿಸುತ್ತೇನೆ. ಪ್ರತಿ ವರ್ಷ ಜನ್ಮದಿನದ ನಿಮಿತ್ತ ಮಕ್ಕಳಿಗೆ ಸನ್ಮಾನಿಸುತ್ತೇನೆ. ಜೊತೆಗೆ ಶಿಕ್ಷಕರನ್ನು ಗೌರವಿಸುತ್ತೇನೆ. ಇದೆಲ್ಲದರ ಪರಿಣಾಮವಾಗಿ ಹಿಂದೆ ಶೇ.24ರಿಂದ 30ರ ಒಳಗಿರುತ್ತಿದ್ದ ಫಲಿತಾಂಶ ಈ ವರ್ಷದ ಫಲಿತಾಂಶ ಶೇ.93ಕ್ಕಿಂತ ಹೆಚ್ಚು ದಾಖಲಾಗಿದೆ ಎಂದು ಹೇಳಿದರು.

ಈ ವರ್ಷದ ಫಲಿತಾಂಶದಲ್ಲಿ ಔರಾದ(ಬಿ) ತಾಲ್ಲೂಕು ಜಿಲ್ಲೆಯಲ್ಲಿ ಪ್ರಥಮ ಸ್ಥಾನದಲ್ಲಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿಯೇ ಪ್ರಥಮ ಬರಬೇಕು ಎಂಬುದು ನನ್ನ ಸಂಕಲ್ಪವಾಗಿದೆ. ಶೇ.100ರಷ್ಟು ಫಲಿತಾಂಶ ತರಲು ಅಧಿಕಾರಿಗಳು ಮತ್ತು ಶಿಕ್ಷಕರು ಪ್ರಯತ್ನಿಸಬೇಕು. ವಿದ್ಯಾರ್ಥಿಗಳು ಸರಿಯಾಗಿ ಅಭ್ಯಾಸ ಮಾಡಬೇಕು. ಪರಿಸರ ದಿನಾಚರಣೆಯ ನಿಮಿತ್ತ ಸಸಿಗಳನ್ನು ಕೊಡಲಾಗುತ್ತಿದೆ. ಎಲ್ಲರೂ ತಮ್ಮ ಮನೆಗಳ ಮುಂದೆ ನೆಟ್ಟು, ಸರಿಯಾಗಿ ಬೆಳೆಸಬೇಕು. ನಮ್ಮ ಕ್ಷೇತ್ರ ಹಚ್ಚ ಹಸಿರಾಗಿಸುವ ನನ್ನ ಕನಸಿಗೆ ತಾವುಗಳು ಕೈಜೋಡಿಸಬೇಕು ಎಂದು ಶಾಸಕರು ಕೋರಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಗುರುಬಸವ ಪಟ್ಟದೇವರು ಮಾತನಾಡಿ, ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡಲಾಗಿದೆ. ಶಾಸಕರಾದ ಪ್ರಭು ಚವ್ಹಾಣ ಅವರು ಅಗ್ರಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು, ಅವರ ಪಾಲಕರನ್ನು ಮತ್ತು ಶಾಲೆಯ ಮುಖ್ಯಗುರುಗಳನ್ನು ಸನ್ಮಾನಿಸುತ್ತಿರುವುದು ಅಪರೂಪದ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ತಾಪಂ ಇಒ ಕಿರಣ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ವಾಗಂಬರ ಗಾಯಕವಾಡ, ಕ್ಷೇತ್ರ ಸಮನ್ವಯಾಧಿಕಾರಿ ಪ್ರಕಾಶ ರಾಠೋಡ, ಮುಖಂಡರಾದ ವಸಂತ ಬಿರಾದಾರ, ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಸಚಿನ ರಾಠೋಡ, ರಾಮಶೆಟ್ಟಿ ಪನ್ನಾಳೆ, ಪ್ರತೀಕ ಚವ್ಹಾಣ, ಇಲಾಖೆಯ ಸಂಜಯ ಮೇತ್ರೆ, ಶಾಲಿವಾನ ಉದಗೀರೆ, ಬಲಭೀಮ ಕುಲಕರ್ಣಿ, ರಾಜಕುಮಾರ ಹಲಮಂಡಗೆ, ನಯೀಮೋದ್ದಿನ, ಪ್ರವೀಣ ಕೋಳೆಕರ್, ಬಾಲಾಜಿ ಅಮರವಾಡಿ, ಓಂಪ್ರಕಾಶ ದಡ್ಡೆ, ಗುರುನಾಥ ರಾಜಗೀರಾ ಸೇರಿದಂತೆ ಪ್ರೌಢ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು, ಇಲಾಖೆಯ ಅನುಷ್ಠಾನ ಅಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅಗ್ರಶ್ರೇಣಿಯಲ್ಲಿ ಉತ್ತೀರ್ಣರಾದ ಸಾವಿರಾರು ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123. Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**